ಸಂಪುಟ : 9 ಸಂಚಿಕೆ 43 ಪುಟ : 4 ಬೆಲೆ: 3.00 ಶುಕ್ರವಾರ ಮಾರ್ಚ್ 15 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 43 Pages : 4 Price : 3.00 Friday March 15 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದಿನ ನೀರು ಪೂರೈಕೆ ವಿವರ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಬೆಟಗೇರಿ ಅವಳಿ ನಗರದಲ್ಲಿ ಮಾರ್ಚ್ 15ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

ಸ್ಥಳಗಳ ವಿವರ : ವಾರ್ಡ್ ನಂ. 21, 22 ರಲ್ಲಿ ವಿಜಯನಗರ ಶಾಲೆ, ಶಿಗ್ಲಾವಿ ಲೇಔಟ್, ಕರುಗಲ್ ಲೇಔಟ್, ಟವರ್ ಕಂಬ, ವಾಲ್ಮೀಕಿ ಭವನ, ಪಾಟೀಲರ ಲೈನ್, ಕಮತರ್ ಲೈನ್, ವಾರ್ಡ್ ನಂ. 16ರಲ್ಲಿ ಹೊಂಬಳ ನಾಕಾ ಜನತಾ ಕಾಲೋನಿ, ಶೌಚಾಲಯದ ಹಿಂದಿನ ಭಾಗ, ಎಲ್ಲಮ್ಮನ ಗುಡಿ ಲೈನ್, ಕಟಗಿ ಅಡ್ಡದ ಲೈನ್, ಡಿಸಿ ಮಿಲ್ ರೋಡ್ ಕೆಲವು ಉಳಿದ ಭಾಗಗಳು.

ವಾರ್ಡ್ ನಂ. 28 ರಲ್ಲಿ ಪಂಚಾಕ್ಷರಿ ನಗರ ಆರನೇ ಕ್ರಾಸ್ ಉಳಿದ ಭಾಗಗಳು, ವಾರ್ಡ್ ನಂ. 29 ರಲ್ಲಿ ರಾಜೀವ್ ಗಾಂಧಿ ನಗರ, ಗುಂಪಿನ ಮನೆ, ಸುಡಗಾಡ ಸಿದ್ದರ ಕಾಲೋನಿ ಲೈನ್, ಬಾಂಡಗೆಯವರ ಲೈನ್, ಪೊಲೀಸ್ ಸ್ಟೇಶನ್ ಕೆಳಗಿನ ಭಾಗ, ವಾರ್ಡ್ ನಂ. 21, 23, 20 ,19 ಹಳೇ ಲೈನ್, ಕುಂಬಾರ್ ಲೈನ್, ದ್ಯಾಮಪ್ಪನ ಕಟ್ಟಿ ಲೈನ್, ಗಂಜಿ ಬಸವೇಶ್ವರ ಸರ್ಕಲ್, ಪಡಗದ ಭಾಗ1, 2 ಸಿಂಧನೂರ ಲೈನ್, ಖಾನ್ ತೋಟ ಭಾಗ, ಕೊಟ್ಟೂರು ಅವರ ಲೈನ್, ಬೇವಿನಮರದಮ್ಮ ಲೈನ್, ಹುಲಿಗೆಮ್ಮನ ಗುಡಿ ಲೈನ್ ಕೆಲವು ಉಳಿದ ಭಾಗಗಳು,

ವಾರ್ಡ್ ನಂ. 6ರಲ್ಲಿ ಕನ್ಯಾಳ ಅಗಸಿ, ಅಂಬೇಡ್ಕರ್ ನಗರ, ಭಜಂತ್ರಿ ಓಣಿ, ಹೂಲಿಯವರ ಲೈನ್, ಜಮಲಮ್ಮನ ಗುಡಿ ಲೈನ್, ಹಾದಿಮನಿಯವರ ಲೈನ್.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸಲು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾರ್ವಜನಿಕರ ಗಮನಕ್ಕೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಮುಳಗುಂದ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿ ಬರುವ ಪಟ್ಟಣ ಪಂಚಾಯತಿ ಮಾಲೀಕತ್ವದ ವಾರ್ಡ್ ನಂ.03 ಚೌಡನಪೇಟಿ ಓಣಿಯಲ್ಲಿರುವ ಟಿ.ಪಿ.ಸಿ ನಂ.1706ನೇದ್ದರ ಖುಲ್ಲಾ ಜಾಗೆಯನ್ನು ಈಜುಕೊಳ ನಿರ್ಮಾಣ ಮಾಡುವ ಸಲುವಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಗದಗ ಅವರ ಮನವಿ ಸಲ್ಲಿಸಿದ್ದರ ಮೇರೆಗೆ ಆಡಳಿತಾಧಿಕಾರಿಗಳು ಪಟ್ಟಣ ಪಂಚಾಯತ್ ಮುಳಗುಂದ ಹಾಗೂ ತಹಸೀಲ್ದಾರ ತಾಲೂಕಾ ಕಾರ್ಯನಿರ್ವಾಹಕ ದಂಡಾಧಿಕಾರಿಗಳು, ಗದಗ ರವರು ಸ್ವೀಕರಿಸಿದ ನಡಾವಳಿಯಂತೆ ನಿವೇಶನವನ್ನು ವರ್ಗಾಯಿಸಲು ನಿರ್ಣಯಿಸಲಾಗಿದೆ.

ಈ ಟಿ.ಪಿ.ಸಿ ನಂಬರ ಅನ್ನು ಈಜುಕೊಳ ನಿರ್ಮಾಣ ಮಾಡುವ ಸಲುವಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಗದಗ ರವರಿಗೆ ವರ್ಗಾಯಿಸಲು ಯಾವುದಾದರೂ ತಂಟೆ ವ ತಕರಾರು ಇದ್ದಲ್ಲಿ ಮುಖ್ಯಾಧಿಕಾರಿಗಳು ಪಟ್ಟಣ ಪಂಚಾಯತ ಮುಳಗುಂದ ಇವರ ಹೆಸರಿನಲ್ಲಿ ಈ ಕಾರ್ಯಾಲಯಕ್ಕೆ ಲಿಖಿತವಾಗಿ ಪ್ರಕಟಣೆ ಹೊರಡಿಸಿದ ದಿನದಿಂದ 7 ದಿನದೊಳಗಾಗಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮುಳಗುಂದ ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿಗಳ ಕಾರ್ಯಾಲಯವನ್ನು ಸಂಪರ್ಕಿಸಬಹುದಾಗಿದೆ.

## ಗದಗ,-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾಗಿ ಅಕ್ಬರಸಾಬ ಬಬರ್ಚಿ ನೇಮಕ

**■ವಿಜಯಸಾಕ್ಷಿ ಸುದ್ದಿ, ಗದಗ**



ಕಳೆದ ಹಲವು ತಿಂಗಳಿನಿಂದ ಖಾಲಿ ಇದ್ದ ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಸ್ಥಾನಕ್ಕೆ ಹಿರಿಯ ಕಾಂಗ್ರೆಸ್ ಮುಖಂಡ ಅಕ್ಬರಸಾಬ ಬಬರ್ಚಿ ಅವರನ್ನು ನೇಮಿಸಿ ಸರಕಾರ ಆದೇಶ ಹೊರಡಿಸಿದೆ.

ಸರಳ, ಸಜ್ಜನಿಕೆಯ ಅಕ್ಬರಸಾಬ ಬಬರ್ಚಿ ಅವರ ನೇಮಕಕ್ಕೆ ಹಲವಾರು ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಅಭಿನಂದಿಸಿದ್ದಾರೆ.

ಸರಕಾರದ ಅಧೀನ ಕಾರ್ಯದರ್ಶಿ ( ಅಭಿವೃದ್ಧಿ ಪ್ರಾಧಿಕಾರ ಮತ್ತು ನಯೋಸೇ) ಲತಾ.ಕೆ ಅವರು ಗುರುವಾರ ಸಂಜೆ ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಸ್ಥಾನವೂ ಸೇರಿದಂತೆ ಹಾವೇರಿ, ಹೊಸಪೇಟೆ, ಯಾದಗಿರಿ, ವಿಜಯಪುರ ಹಾಗೂ ಹಂಪಿ ವಿಶ್ವಪರಂಪರೆ ಪ್ರದೇಶ ಯೋಜನಾ ಪ್ರಾಧಿಕಾರಕ್ಕೂ ಅಧ್ಯಕ್ಷರನ್ನು ನೇಮಿಸಿ ಆದೇಶ ಹೊರಡಿಸಿದ್ದಾರೆ.

### ಪೊಲೀಸ್ ಇಲಾಖೆಯ 'ಕಣ್ಗಾವಲು' ವ್ಯವಸ್ಥೆಗೆ ಸಚಿವ ಎಚ್.ಕೆ. ಪಾಟೀಲ ಚಾಲನೆ

# ಜಿಲ್ಲಾ ಪೊಲೀಸ್ ಇಲಾಖೆ ಶಿಸ್ತಿಗೆ ಹೆಸರುವಾಸಿ

**■ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯದಲ್ಲಿಯೇ ಗದಗ ಜಿಲ್ಲೆಯಲ್ಲಿ ಕಣ್ಗಾವಲು ವ್ಯವಸ್ಥೆಯನ್ನು ಮೊಟ್ಟಮೊದಲ ಬಾರಿಗೆ ಜಾರಿಗೊಳಿಸಿ ಜನರನ್ನು ಮತ್ತು ಜನರ ಆಸ್ತಿಯನ್ನು ರಕ್ಷಿಸುವಲ್ಲಿ ಪೊಲೀಸ್ ಇಲಾಖೆ ದಿಟ್ಟ ನಿರ್ಧಾರ ತೆಗೆದು-ಕೊಂಡಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್. ಕೆ. ಪಾಟೀಲ ಹೇಳಿದರು.

ನಗರದ ಶಹರ ಪೊಲೀಸ್ ಠಾಣೆ ಆವರಣದಲ್ಲಿ ಗುರುವಾರ ಕೀಲಿ ಹಾಕಿದ ಮನೆಗಳ ಕಣ್ಗಾವಲು ವ್ಯವಸ್ಥೆ ಹಾಗೂ ಪೊಲೀಸ್ ಜಾಗೃತಿ ವಾಹನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಮನೆಗಳ್ಳತನ ತಡೆಯುವುದಕ್ಕೆ ರಾಜ್ಯದಲ್ಲಿಯೇ ಮೊಟ್ಟಮೊದಲ ಬಾರಿಗೆ ಕಣ್ಗಾವಲು ವ್ಯವಸ್ಥೆ ಆರಂಭಿಸಿ ಜನರ ಆಸ್ತಿಯನ್ನು ಸಂರಕ್ಷಿಸಿ ಕಳ್ಳತನ ಮಾಡುವವರಿಗೆ ತಕ್ಕ ಶಾಸ್ತಿ ಮಾಡುವ ಯೋಜನೆ ಜಾರಿಗೊಳಿಸಲಾಗಿದೆ ಎಂದರು.

ಪೊಲೀಸ್ ಇಲಾಖೆ ಅತ್ಯಂತ ಕಾಳಜಿ ವಹಿಸಿ ಗಂಭೀರವಾಗಿ ಕಾರ್ಯ ಪ್ರವೃತ್ತರಾಗಿದ್ದು, ಈಗಾಗಲೇ ಯೋಜನೆಗೆ ಬೇಕಾದ ಅಗತ್ಯ ಉಪಕರಣಗಳನ್ನು




ಒದಗಿಸಲು ಪ್ರಾರಂಭಿಸಲಾಗಿದೆ. ಜಿಲ್ಲಾ ಪೊಲೀಸ್ ಇಲಾಖೆಯಿಂದ ಈಗಾಗಲೇ ಥರ್ಡ್ ಐ ಯೋಜನೆ ಜಾರಿಗೊಳಿಸುವ ಮೂಲಕ ಜನಸಾಮಾನ್ಯರು ಸಂಚಾರಿ ನಿಯಮಗಳನ್ನು ಸರಿಯಾಗಿ ಪಾಲಿಸುವಂತೆ ಜಾಗೃತಿ ಮೂಡಿಸಿ ಅನುಷ್ಠಾನಗೊಳಿಸಲಾಗುತ್ತಿದೆ. ಥರ್ಡ್ ಐ ಜಾರಿಯಿಂದ ಕಾನೂನು ಸುವ್ಯವಸ್ಥೆ ಸರಿಯಾದ ಕ್ರಮದಲ್ಲಿ ಸಾಗುತ್ತಿದ್ದು, ಪ್ರಕರಣಗಳನ್ನು ಶೀಘ್ರವಾಗಿ ಕಂಡು ಹಿಡಿಯಲು ಸಹಕಾರಿಯಾಗಿದೆ. ನಗರದ ಜನನಿಬಿಡ ಹೊಸ ಬಡಾವಣೆಗಳಲ್ಲಿ ಮನೆಗಳ್ಳತನ ಪ್ರಕರಣಗಳ ತಡೆಗೆ ಈ ಕಣ್ಗಾವಲು ವ್ಯವಸ್ಥೆ ಅತ್ಯಂತ ಸಹಕಾರಿಯಾಗಿದೆ. ಜನಸಮಾನ್ಯರ ಮನೆ ಹಾಗೂ ಆಸ್ತಿ ರಕ್ಷಣೆ ಮಾಡುವ ಕಾರ್ಯವನ್ನು ಪೊಲೀಸ್ ಇಲಾಖೆ ಈ ಕಣ್ಗಾವಲು ವ್ಯವಸ್ಥೆ ಮೂಲಕವೂ ಮಾಡಬಹುದಾಗಿದೆ. ಇದಕ್ಕಾಗಿ ಪೊಲೀಸ್ ಇಲಾಖೆಯನ್ನು ಅಭಿನಂದಿಸುತ್ತೇನೆ ಎಂದರು.




> ಪೊಲೀಸ್ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ಸೌಜನ್ಯದಿಂದ ಕಾರ್ಯನಿರ್ವಹಿಸುವ ಮೂಲಕ ಆದರ್ಶ ಸಮಾಜ ನಿರ್ಮಾಣಕ್ಕೆ ಮುಂದಾಗಲಿ. ಪೊಲೀಸ್ ಇಲಾಖೆಯಲ್ಲಿನ ತಾಂತ್ರಿಕ ಆಧುನೀಕರಣಕ್ಕೆ ಅಗತ್ಯವಿರುವ ಸಂಪೂರ್ಣ ಬೆಂಬಲವನ್ನು ನೀಡಲಾಗುವುದು. ಸಮಾಜದಲ್ಲಿ ಶಾಂತಿ, ಸುರಕ್ಷತೆ, ಸಮಾಧಾನ ತರಲು ಪೊಲೀಸ್ ಅಧಿಕಾರಿಗಳು ಜನಸ್ನೇಹಿ ಕಾರ್ಯಗಳ ಮೂಲಕ ಸಾಧ್ಯವಾಗಿಸಬಹುದಾಗಿದೆ. ಪೊಲೀಸರೂ ಸಹ ಸಮಾಜ ಸೇವಕರು. ನೀವು ಮಾಡುವ ಒಳ್ಳೆಯ ಕಾರ್ಯ ಸರ್ಕಾರಕ್ಕೆ ಕೀರ್ತಿ ತರಲಿದೆ. ಸಂಸ್ಕೃತಿ, ಸೇವೆ, ಶಿಸ್ತಿಗೆ ಗದಗ ಜಿಲ್ಲೆಯ ಪೊಲೀಸ್ ಇಲಾಖೆ ಹೆಸರುವಾಸಿಯಾಗಿದೆ.
>
> - ಎಚ್.ಕೆ. ಪಾಟೀಲ.
> ಜಿಲ್ಲಾ ಉಸ್ತುವಾರಿ ಸಚಿವರು.

> ಪೊಲೀಸ್ ಜಾಗೃತಿ ವಾಹನದ ಮೂಲಕ ಮನೆ ಕಳ್ಳತನ, ಸರ ಕಳ್ಳತನ, ವಾಹನ ಕಳವು, ಮಾದಕ ವಸ್ತುಗಳ ದುರ್ಬಳಕೆ, ಸಂಚಾರಿ ನಿಯಮದ ಬಗ್ಗೆ ಸಾರ್ವಜನಿಕರಿಗೆ ಜಾಗೃತಿ ಮೂಡಿಸಲಾಗುತ್ತಿದೆ. ಜನಸ್ನೇಹಿ ಪೊಲೀಸ್ ವ್ಯವಸ್ಥೆಗೆ ಗದಗ ಜಿಲ್ಲಾ ಪೊಲೀಸ್ ಇಲಾಖೆ ಸದಾ ಸಿದ್ಧವಾಗಿದೆ. ಸೈಬರ್ ಅಪರಾಧಗಳು ನಡೆದಲ್ಲಿ ಸಹಾಯವಾಣಿ ಸಂಖ್ಯೆ-1930, ತುರ್ತು ಸಂದರ್ಭದಲ್ಲಿ ತುರ್ತು ಸಹಾಯವಾಣಿ-112ಗೆ ಸಾರ್ವಜನಿಕರು ಕರೆ ಮಾಡಿ ಸಹಾಯ ಪಡೆಯುವಂತೆ ಎಸ್‌ಪಿ ಬಿ.ಎಸ್. ನೇಮಗೌಡ ತಿಳಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಮಾತನಾಡಿ, ಜಿಲ್ಲೆಯಲ್ಲಿ ಅಪರಾಧಗಳನ್ನು ತಡೆಗಟ್ಟಲು ಕಣ್ಗಾವಲು ವ್ಯವಸ್ಥೆಯಿಂದ ಬೀಗಹಾಕಿದ ಮನೆಗಳ ನಿಗಾವಹಿಸಲು ಉಪಯುಕ್ತವಾಗಿದೆ. ಸಹಾಯವಾಣಿ-9480021100 ಸಂಖ್ಯೆಗೆ help ಎಂದು ವಾಟ್ಸಪ್ ಮಾಡಿ ಯೋಜನೆಯ ಸದುಪಯೋಗ ಪಡೆದುಕೊಳ್ಳಬಹುದಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಹೆಚ್ಚುವರಿ ಪೊಲೀಸ್ ಅಧೀಕ್ಷಕ ಎಂ.ಬಿ. ಸಂಕದ ಸೇರಿದಂತೆ ಪೊಲೀಸ್ ಇಲಾಖೆಯ ಹಿರಿಯ ಅಧಿಕಾರಿಗಳು, ಗಣ್ಯರಾದ ಡಾ.ನಾಗನೂರ, ಪ್ರಭು ಬುರಬುರೆ, ಎಸ್.ಎನ್. ಬಳ್ಳಾರಿ, ಅಶೋಕ ಮಂದಾಲಿ, ಭಾಷಾ ಮಲ್ಲಸಮುದ್ರ ಹಾಜರಿದ್ದರು.

### ಕಿಮ್ಸ್‌ಗೆ ವೈದ್ಯಕೀಯ ಉಪಕರಣಗಳ ಖರೀದಿಗೆ ಚೆಕ್ ವಿತರಿಸಿದ ಶಾಸಕ ಜಿ.ಎಸ್. ಪಾಟೀಲ


# ಕಿಮ್ಸ್ ವೈದ್ಯರ ಸೇವೆ ಶ್ಲಾಘನೀಯ

**■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**

ಉತ್ತರ ಕರ್ನಾಟಕ ಭಾಗದ ಜನರಿಗೆ ಕಿಮ್ಸ್ ಸಂಸ್ಥೆಯು ಉತ್ತಮ ಚಿಕಿತ್ಸೆ ನೀಡುತ್ತಿದೆ. ಈ ಸಂಸ್ಥೆಯ ವೈದ್ಯರ ಸೇವೆ ಶ್ಲಾಘನೀಯ ಎಂದು ಕರ್ನಾಟಕ ರಾಜ್ಯ ಮಿನರಲ್ಸ್ ಕಾರ್ಪೋರೇಷನ್‌ನ ಅಧ್ಯಕ್ಷ ಜಿ.ಎಸ್. ಪಾಟೀಲ್ ಹೇಳಿದರು.

ಗುರುವಾರ ಹುಬ್ಬಳ್ಳಿಯ ಕಿಮ್ಸ್‌ನ ಆಡಿಟೋರಿಯಂನಲ್ಲಿ ಕರ್ನಾಟಕ ರಾಜ್ಯ ಮಿನರಲ್ಸ್ ಕಾರ್ಪೋರೇಷನ್ ವತಿಯಿಂದ ಸಿ.ಎಸ್.ಆರ್. ನಿಧಿಯಡಿ ರೂ.1.75 ಕೋಟಿ ರೂ ವೆಚ್ಚದ ವೈದ್ಯಕೀಯ ಉಪಕರಣಗಳಾದ ನ್ಯೂಯೋನಟಲ್, ಇನ್ಕುಬೇಟರ್ಸ್ ಮತ್ತು ಆಪರೇಟಿಂಗ್ ಲ್ಯಾಪ್ರೋಸ್ಕೋಪಿ ಖರೀದಿಗಾಗಿ ಕಿಮ್ಸ್‌ಗೆ ಚೆಕ್ ವಿತರಿಸುವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

1957ರಲ್ಲಿ ಕಿಮ್ಸ್ ಸಂಸ್ಥೆಯನ್ನು ಸ್ಥಾಪಿಸಲಾಯಿತು. ಕಿಮ್ಸ್ ಇಂದು ಹೆಮ್ಮರವಾಗಿ ಬೆಳೆದಿದೆ. ಕಿಮ್ಸ್ ಆಸ್ಪತ್ರೆಯಲ್ಲಿ ನನ್ನ ತಂದೆ-ತಾಯಿಯವರು ಸಹ ಚಿಕಿತ್ಸೆ ಪಡೆದು ಗುಣಮುಖರಾಗಿದ್ದರು. ಪ್ರತಿನಿತ್ಯ 4 ಸಾವಿರಕ್ಕೂ ಅಧಿಕ ರೋಗಿಗಳು ಇಲ್ಲಿ ದಾಖಲಾಗುತ್ತಾರೆ. ಸಾವಿರಕ್ಕೂ ಅಧಿಕ ವೈದ್ಯರು ಕಾರ್ಯನಿರ್ವಹಿಸುತ್ತಿದ್ದು, ಈ ಸಂಸ್ಥೆಯಲ್ಲಿ ಚಿಕಿತ್ಸೆ ಪಡೆದು ಅನೇಕರು ಗುಣಮುಖರಾಗಿದ್ದಾರೆ. ದೇಶದಲ್ಲಿ 100 ಗರ್ಭಿಣಿಯರಲ್ಲಿ 97 ಗರ್ಭಿಣಿಯರು ಹೆರಿಗೆ




ಸಮಯದಲ್ಲಿ ಅಸುನೀಗುತ್ತಿದ್ದಾರೆ ಎಂದರು.

ಕರ್ನಾಟಕ ಕೊಳಚೆ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಅಬ್ಬಯ್ಯ ಪ್ರಸಾದ ಮಾತನಾಡಿ, ಉತ್ತರ ಕರ್ನಾಟಕಕ್ಕೆ ಕಿಮ್ಸ್ ಸಂಸ್ಥೆ ಸಂಜೀವಿನಿಯಾಗಿದೆ. ಬೇರೆ ಖಾಸಗಿ ಆಸ್ಪತ್ರೆಯಲ್ಲಿ ಇಂತಹ ಸೇವೆ ದೊರೆಯುವುದಿಲ್ಲ. ಕೋವಿಡ್ ಸಂದರ್ಭದಲ್ಲಿ ನಾನು ಸಹ ಇಲ್ಲಿ ದಾಖಲಾಗಿದ್ದೆ. ಉತ್ತಮ ಗುಣಮಟ್ಟದ ಚಿಕಿತ್ಸೆ ನೀಡಿ ಗುಣಮುಖರಾಗುವಂತೆ ವೈದ್ಯರು ಮಾಡಿದರು. ವೈದ್ಯರು ಮಾನವೀಯತೆ, ಮನುಷ್ಯತ್ವವನ್ನು ಹೊಂದಬೇಕಾಗಿದೆ. ಹೊಸ ಆವಿಷ್ಕಾರ, ಹೊಸ ತಂತ್ರಜ್ಞಾನವನ್ನು ನಾವು ಅಳವಡಿಸಿಕೊಳ್ಳುವುದು ಅವಶ್ಯಕವಾಗಿದೆ. ವಿವಿಧ ರೋಗಗಳ ಕುರಿತು ಜನರಿಗೆ ಅರಿವು ಮೂಡಿಸುವ ಕಾರ್ಯಕ್ರಮಗಳು ನಡೆಯಬೇಕಿದೆ. ಕಿಮ್ಸ್‌ಗೆ ಹೆಚ್ಚಿನ ಅನುದಾನವನ್ನು ತರುವಲ್ಲಿ ಪ್ರಾಮಾಣಿಕವಾದ ಪ್ರಯತ್ನ ಮಾಡುತ್ತೇನೆ ಎಂದು ಭರವಸೆ ನೀಡದರು.

ಕರ್ನಾಟಕ ರಾಜ್ಯ ಮಿನರಲ್ಸ್ ಕಾರ್ಪೋರೇಷನ್‌ನ ವ್ಯವಸ್ಥಾಪಕ ನಿರ್ದೇಶಕ ಜಯವಿಭವ ಸ್ವಾಮಿ ಮಾತನಾಡಿ, ಕಿಮ್ಸ್ ಸಂಸ್ಥೆ ಅತಿ ಶ್ರೇಷ್ಠ ಸಂಸ್ಥೆಯಾಗಿದೆ. ಸಿ.ಎಸ್.ಆರ್. ನಿಧಿಯ ಸದ್ಬಳಕೆಯಾಗಬೇಕು. ಬಡವರಿಗೆ ಉತ್ತಮ ಗುಣಮಟ್ಟದ ಚಿಕಿತ್ಸೆಯು ದೊರೆಯುವಂತಾಗಬೇಕಿದೆ ಎಂದರು.

> ರಾಜ್ಯದಲ್ಲಿ ಹೆರಿಗೆ ಸಂದರ್ಭದಲ್ಲಿ 1000ರಲ್ಲಿ 24 ಮಕ್ಕಳು ಸಾವಿಗೀಡಾಗುತ್ತಿದ್ದು, ಸುಧಾರಿತ-ಆಧುನಿಕ ಯಂತ್ರೋಪಕರಣಗಳನ್ನು ಬಳಕೆ ಮಾಡಿಕೊಳ್ಳಬೇಕು. ಹೀಗಾಗಿ ಕಿಮ್ಸ್‌ಗೆ ಅವಶ್ಯಕವಿರುವ ವೈದ್ಯಕೀಯ ಉಪಕರಣಗಳನ್ನು ಒದಗಿಸಲಾಗುತ್ತಿದೆ. ಗದಗ, ಕೊಪ್ಪಳ ಸೇರಿದಂತೆ ವಿವಿಧ ಜಿಲ್ಲೆಗಳ ರೋಗಿಗಳು ಇಲ್ಲಿ ಚಿಕಿತ್ಸೆ ಪಡೆಯುತ್ತಾರೆ. ಈ ಭಾಗದ ಊರುಗಳ ಜನರಿಗೆ ಒಳ್ಳೆಯ ಚಿಕಿತ್ಸೆ ನೀಡುವಲ್ಲಿ ವೈದ್ಯರು ಮುಂದಾಗಬೇಕು ಎಂದು ಜಿ.ಎಸ್. ಪಾಟೀಲ ತಿಳಿಸಿದರು.

ಮಾಜಿ ಸಚಿವ ಎ.ಎಂ. ಹಿಂಡಸಗೇರಿ, ಮಾಜಿ ಸಂಸದ ಪ್ರೊ. ಐ.ಜಿ. ಸನದಿ, ಎ.ಎಂ. ಕುಲಕರ್ಣಿ, ಬಿ.ಜಿ. ವಸ್ತ್ರದ, ಡಾ. ಸಿ.ಎಸ್. ಪಾಟೀಲ, ಐ.ಎಸ್. ಪಾಟೀಲ, ಮುಖಂಡರಾದ ಅನಿಲಕುಮಾರ ಪಾಟೀಲ, ಶರಣಪ್ಪ ಪಟಗಿ, ಕಿಮ್ಸ್ ಪ್ರಾಂಶುಪಾಲ ಡಾ.ಈಶ್ವರ ಹೊಸಮನಿ ಸೇರಿದಂತೆ ಅಧಿಕಾರಿಗಳು ಉಪಸ್ಥಿತರಿದ್ದರು. ಸುಕನ್ಯಾ ಪ್ರಾರ್ಥಿಸಿದರು. ಕಿಮ್ಸ್ ನಿರ್ದೇಶಕ ಡಾ. ಎಸ್.ಎಫ್. ಕಮ್ಮಾರ ಸ್ವಾಗತಿಸಿದರು. ಡಾ.ರಾಜಶೇಖರ ದ್ಯಾಬೇರಿ ನಿರೂಪಿಸಿದರು.

## ಪುರಸಭೆಯಿಂದ ಅನ್ಯಭಾಷೆಯ ನಾಮಫಲಕ ತೆರವು

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದಲ್ಲಿ ಕಳೆದ ಒಂದು ವಾರದ ಹಿಂದೆ ಪಟ್ಟಣದ ಪ್ರತಿಯೊಂದು ವ್ಯಾಪಾರಿ ಸಂಸ್ಥೆಗಳು ತಮ್ಮ ಅಂಗಡಿಗಳ ಮೇಲೆ ಹಾಕಲಾಗುವ ನಾಮಫಲಕಗಳಲ್ಲಿ ಶೇ.60ರಷ್ಟು ಕನ್ನಡ ಭಾಷೆ ಇಲ್ಲದ ನಾಮಫಲಕಗಳನ್ನು ಬುಧವಾರ ಸಂಜೆ ಪುರಸಭೆಯ ಸಿಬ್ಬಂದಿಗಳು ಮುಖ್ಯಾಧಿಕಾರಿ ಮಹೇಶ ಹಡಪದ ನೇತೃತ್ವದಲ್ಲಿ ತೆರವುಗೊಳಿಸಿದರು.

ಬುಧವಾರ ಸಂಜೆ ರಸ್ತೆಗಿಳಿದ ಪುರಸಭೆ ಸಿಬ್ಬಂದಿಗಳು ವಾಹನ, ಜೆಸಿಬಿ ಬಳಸಿ ನಾಮಫಲಕಗಳನ್ನು ತೆರವುಗೊಳಿಸಿದರು. ನಾಮಫಲಕ ಬದಲಾವಣೆ, ತೆರವುಗೊಳಿಸುವ ಬಗ್ಗೆ ವಾರ ಮೊದಲೇ ತಿಳಿಸಲಾಗಿತ್ತು.



ಆದರೂ ಅನೇಕರು ಸ್ಪಂದಿಸಿರಲಿಲ್ಲ. ಬುಧವಾರ ಮತ್ತು ಗುರುವಾರ ಕಾರ್ಯಾಚರಣೆಗಿಳಿದ ಪುರಸಭೆ ಸಿಬ್ಬಂದಿ, ಪೌರ ಕಾರ್ಮಿಕರು ಸಾಕಷ್ಟು ಬೋರ್ಡ್‌ಗಳನ್ನು ವಶಕ್ಕೆ ಪಡೆದುಕೊಂಡರು.

ಈ ವೇಳೆ ಮಾತನಾಡಿದ ಮುಖ್ಯಾಧಿಕಾರಿ ಮಹೇಶ ಹಡಪದ, ಸರಕಾರದ ಆದೇಶದನ್ವಯ ನಾಮಫಲಕಗಳು ಶೇ.60ರಷ್ಟು ಕನ್ನಡ ಭಾಷೆಯಲ್ಲಿ ಇರಬೇಕು. ಅದರಲ್ಲೂ ಕನ್ನಡವೇ ಅಗ್ರಸ್ಥಾನದಲ್ಲಿರಬೇಕು. ಅದೇಶದನ್ವಯ ಕನ್ನಡೇತರ ಭಾಷೆಯ ನಾಮಫಲಕಗಳನ್ನು ತೆಗೆದು ಹಾಕುವಂತೆ ಕರ್ನಾಟಕ ರಕ್ಷಣಾ ವೇದಿಕೆಯವರು ಮನವಿ ಮಾಡಿದ್ದರು. ಈ ಹಿನ್ನೆಲೆಯಲ್ಲಿ ಸರಕಾರದ ಆದೇಶದಂತೆ ಎಲ್ಲ ಅಂಗಡಿಗಳಿಗೆ ಬದಲಾವಣೆಗಾಗಿ ಸೂಚನೆ ನೀಡಲಾಗಿತ್ತು. ಆದರೆ ಕೆಲವರು ಬದಲಾವಣೆ ಮಾಡದ ಹಿನ್ನೆಲೆಯಲ್ಲಿ ತೆರವು ಕಾರ್ಯಾಚರಣೆ ಮಾಡಲಾಗಿದೆ. ಮತ್ತೆ ಕನ್ನಡೇತರ ಫಲಕಗಳು ಕಂಡುಬಂದಲ್ಲಿ ಅಂತಹ ಅಂಗಡಿಗಳ ಮೇಲೆ ಕಾನೂನು ಕ್ರಮವನ್ನು ತೆಗೆದುಕೊಳ್ಳಲಾಗುವದು. ಎಲ್ಲರೂ ಸಹಕಾರ ನಿಡಬೇಕೆಂದು ಮನವಿ ಮಾಡಿದರು.

ಈ ವೇಳೆ ಪುರಸಭೆಯ ಆರೋಗ್ಯ ಸಹಾಯಕ ಮಂಜುನಾಥ ಮುದಗಲ್, ಶಿವಣ್ಣ ಮ್ಯಾಗೇರಿ, ಬಸವಣ್ಣೆಪ್ಪ ನಂದೆಣ್ಣವರ, ಸೇರಿದಂತೆ ಅನೇಕ ಸಿಬ್ಬಂದಿಗಳು ಹಾಜರಿದ್ದರು. ಪುರಸಭೆಯ ಈ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತವಾಯಿತು. ವಾಹನ ನಿಲುಗಡೆ, ನಾಮಫಲಕಗಳ ಬದಲಾವಣೆಗಳಂತಹ ದಿಟ್ಟ ಕ್ರಮಗಳಿಗೆ ಆಡಳಿತ ಮುಂದಾಗಿದ್ದು, ಇದು ಕೆಲವು ದಿನಕ್ಕೆ ಸೀಮಿತವಾಗುವದು ಬೇಡ ಎಂಬ ಅಭಿಪ್ರಾಯಗಳೂ ಕೇಳಿಬಂದವು.

## ತೋಟಗಾರಿಕೆ ಬೆಳೆಗಳಿಂದ ರೈತರಿಗೆ ಅನುಕೂಲ




**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಈ ಬಾರಿ ಬರಗಾಲದ ಹಿನ್ನೆಎಲೆಯಲ್ಲಿ ರೈತರು ಸಾಕಷ್ಟು ತೊಂದರೆಯಲ್ಲಿದ್ದಾರೆ. ನೀರಾವರಿ ಜಮೀನು ಹೊಂದಿದ ರೈತರು ಸಹ ಅಂತರ್ಜಲ ಕೊರತೆಯನ್ನು ಅನುಭವಿಸುತ್ತಿದ್ದು, ಯಾವುದೇ ಬೆಳೆಯನ್ನು ಬೆಳೆಯಲು ಹಿಂಜರಿಯುವಂತಾಗಿದೆ. ಈ ಹಿನ್ನೆಲೆಯಲ್ಲಿ ನೀರಾವರಿ ಇಲಾಖೆಯಿಂದ ರೈತರಿಗೆ ಉಚಿತವಾಗಿ ತರಕಾರಿ ಬೀಜಗಳನ್ನು ನೀಡಲಾಗುತ್ತಿದ್ದು, ರೈತರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಶಾಸಕ ಡಾ.ಚಂದ್ರು ಲಮಾಣಿ ಹೇಳಿದರು.

ಪಟ್ಟಣದಲ್ಲಿ ತೋಟಗಾರಿಕೆ ಇಲಾಖೆಯಿಂದ ನೀರಾವರಿ ಹೊಂದಿದ ರೈತರಿಗೆ ಉಚಿತವಾಗಿ ತರಕಾರಿ ಬೀಜಗಳನ್ನು ವಿತರಿಸಿ ಅವರು ಮಾತನಾಡಿದರು.

ಈ ವರ್ಷ ಮುಂಗಾರು ಮತ್ತು ಹಿಂಗಾರು ಮಳೆ ಕೊರತೆಯಿಂದ ಸಂಪೂರ್ಣ ಬರಗಾಲ ಆವರಿಸಿದೆ. ತೋಟಗಾರಿಕೆ ಬೆಳೆಗಳಿಗೆ ಆದ್ಯತೆ ನೀಡುವ ನಿಟ್ಟಿನಲ್ಲಿ ಇಲಾಖೆ ಉಚಿತವಾಗಿ ಬೀಜಗಳನ್ನು ನೀಡಿರುವದು ಸೂಕ್ತವಾಗಿದೆ ಎಂದರು.

▸▸ 3ನೇ ಪುಟಕ್ಕೆ

## ಸಂಪಾದಕೀಯ

# ಆಸೆಯೇ ದುಃಖಕ್ಕೆ ಮೂಲ

ವೇದ ಸುಳ್ಳಾದರೂ ಗಾದೆ ಸುಳ್ಳಾಗುವುದಿಲ್ಲ ಎನ್ನುವುದಕ್ಕೆ ಒಂದು ತಾಜಾ ನಿದರ್ಶನ ನಮ್ಮ ಕಣ್ಣ ಮುಂದಿದೆ. ಅಧಿಕಾರದ ಆಸೆಗಾಗಿ ಪಕ್ಷಾಂತರ ಮಾಡಿ ಅಲೆದಾಡಿದ ನಾಯಕನಿಗೆ ಈಗ ದುಃಖ ಪಡುವಂತಾಗಿದೆ. ಆ ನಾಯಕ ಯಾರು ಎನ್ನುವುದು ಈಗಾಗಲೇ ತಮ್ಮ ಅರಿವಿಗೆ ಬಂದಿರಬಹುದು.

ಇದು ಕೇವಲ ಮಾಜಿ ಸಿಎಂ ಜಗದೀಶ ಶೆಟ್ಟರ್ ಒಬ್ಬರ ಕಥೆ ಮಾತ್ರವಲ್ಲ. ಬಿಜೆಪಿಯ ಬಹುತೇಕ ಮಾಜಿ ಸಿಎಂ, ಡಿಸಿಎಂಗಳು ಇವತ್ತು ಅಧಿಕಾರ ಕೊಟ್ಟ ಪಕ್ಷದ ವಿರುದ್ಧವೇ ತಿರುಗಿ ಬೀಳುವಂತಾಗಿದೆ. ಆ ಪಟ್ಟಿಯಲ್ಲಿ ಡಿ.ವಿ. ಸದಾನಂದಗೌಡ, ಕೆ.ಎಸ್. ಈಶ್ವರಪ್ಪ ಹೆಸರು ಮುಂಚೂಣಿಯಲ್ಲಿದೆ.

ಈ ಎಲ್ಲ ನಾಯಕರಿಗೆ ಲೋಕಸಭೆ ಚುನಾವಣೆ ಟಿಕೆಟ್ ನಿರಾಕರಿಸಿರುವುದು ಪ್ರಮುಖ ಕಾರಣವಾಗಿದೆ. ವಿಶೇಷವಾಗಿ ಜಗದೀಶ ಶೆಟ್ಟರ್ ಪರಿಸ್ಥಿತಿ ಯಾರಿಗೂ ಬೇಡ ಎನ್ನುವಂತಾಗಿದೆ.

ಅಧಿಕಾರದ ಆಸೆಗಾಗಿ ಬಿಜೆಪಿ ತೊರೆದು ಕಾಂಗ್ರೆಸ್ ಸೇರಿದ ಜಗದೀಶ್ ಶೆಟ್ಟರ್, ವಿಧಾನಸಭೆ ಚುನಾವಣೆಯಲ್ಲಿ ಸೋತು ಮನೆ ಸೇರಿದರು. ಕಾಂಗ್ರೆಸ್‌ನಲ್ಲಿ ಉಳಿದಿದ್ದರೆ ಧಾರವಾಡ ಕ್ಷೇತ್ರದ ಲೋಕಸಭೆ ಅಭ್ಯರ್ಥಿಯಾಗಿಯೂ ಸ್ಪರ್ಧಿಸುವ ಅವಕಾಶವಿತ್ತು.

ಆದರೆ ತಮ್ಮ ಮಾತೃ ಪಕ್ಷದ ತಂತ್ರಗಾರಿಕೆಯನ್ನ ಅರಿಯುವಲ್ಲಿ ವಿಫಲವಾದ ಜಗದೀಶ್ ಶೆಟ್ಟರ್, ಲೋಕಸಭೆ ಚುನಾವಣೆ ಮುಂದಿರುವಾಗಲೇ ಮತ್ತೊಮ್ಮೆ ಬಿಜೆಪಿ ಸೇರ್ಪಡೆಯಾದರು. ಲೋಕಸಭೆ ಚುನಾವಣೆಯಲ್ಲಿ ಬಿಜೆಪಿ ಟಿಕೆಟ್ ಸಿಗುತ್ತದೆ ಎನ್ನುವ ವಿಶ್ವಾಸದಲ್ಲಿದ್ದ ಜಗದೀಶ್ ಶೆಟ್ಟರ್‌ಗೆ ಭಾರೀ ಆಘಾತ ಎದುರಾಗಿದೆ.

ಧಾರವಾಡ ಮತ್ತು ಹಾವೇರಿ ಲೋಕಸಭೆ ಟಿಕೆಟ್ ನಿರೀಕ್ಷೆಯಲ್ಲಿದ್ದ ಜಗದೀಶ್ ಶೆಟ್ಟರ್ ಸದ್ಯ ಬೆಳಗಾವಿತ್ತ ಚಿತ್ತ ಹರಿಸುವಂತಾಗಿದೆ. ಒಂದೊಮ್ಮೆ ಶೆಟ್ಟರ್‌ಗೆ ಬೆಳಗಾವಿ ಟಿಕೆಟ್ ಸಿಕ್ಕರು ಗೆಲುವು ಕಷ್ಟ ಸಾಧ್ಯ. ಬಿಜೆಪಿಗೆ ಜಗದೀಶ್ ಶೆಟ್ಟರ್ ಗೆದ್ದರು ಅಷ್ಟೇ, ಸೋತರು ಅಷ್ಟೇ.

ಜಗದೀಶ್ ಶೆಟ್ಟರ್ ರೀತಿ ಸದಾನಂದ ಗೌಡರಿಗೂ ಬಿಜೆಪಿ ಕೋಕ್ ನೀಡಿದೆ. ಮಾಜಿ ಉಪ ಮುಖ್ಯಮಂತ್ರಿ ಕೆಎಸ್ ಈಶ್ವರಪ್ಪ ಅವರಿಗೂ ಶಾಕ್ ನೀಡಿದೆ. ಪಕ್ಷದ ತೀರ್ಮಾನ ಏನೇ ಇರಲಿ, ಲೋಕಸಭೆ ಚುನಾವಣೆ ವೇಳೆ ಬಿಜೆಪಿ ಮಾಜಿ ಸಿಎಂ, ಡಿಸಿಎಂಗಳನ್ನು ಈ ರೀತಿ ನಡೆಸಿಕೊಂಡಿರುವುದು ನೋಡಿದರೆ, ಭವಿಷ್ಯದಲ್ಲಿ ಬಸವರಾಜ್ ಬೊಮ್ಮಾಯಿಗೂ ಇದೇ ರೀತಿಯ ಅವಮಾನ ಎದುರಿಸಲಿದ್ದಾರೆ ಎನ್ನುವ ಅನುಮಾನ ಮೂಡುತ್ತದೆ. ಒಟ್ಟಾರೆ ಲೋಕಸಭೆ ಚುನಾವಣೆ ಅನೇಕರಿಗೆ ಆಸೆಯೇ ದುಃಖಕ್ಕೆ ಮೂಲ ಎನ್ನುವುದು ಅರ್ಥವಾಗಿದೆ.

## ಮಾರ್ಚ್ 15, ವಿಶ್ವ ಗ್ರಾಹಕ ಹಕ್ಕುಗಳ ದಿನದ ನಿಮಿತ್ತ ವಿಶೇಷ ಲೇಖನ

# ಎಚ್ಚರದಿಂದ ಇರು ಗ್ರಾಹಕ-ನಿನಗೂ ಹಕ್ಕುಗಳಿವೆ

'ಒಬ್ಬ ತೃಪ್ತ ಗ್ರಾಹಕನು ಎಲ್ಲಕ್ಕಿಂತ ಉತ್ತಮ ತಂತ್ರವುಳ್ಳವನಾಗಿರುತ್ತಾನೆ' ಎಂದು ಮೈಕೆಲ್ ಬೋಫ್ ಹೇಳಿದ್ದಾರೆ. ಒಬ್ಬ ಗ್ರಾಹಕ ತನ್ನ ಬೇಕು-ಬೇಡಿಕೆಗಳ ವಸ್ತುಗಳನ್ನು ತನ್ನ ಅಗತ್ಯಕ್ಕೆ ತಕ್ಕಂತೆ, ಗುಣಮಟ್ಟವನ್ನು ಖಾತ್ರಿ ಪಡಿಸಿಕೊಂಡು ತೆಗೆದುಕೊಂಡಾಗ ಆರ್ಥಿಕವಾಗಿ ಮುಂದೆ ಬರಲು ಸಾಧ್ಯ.ಈ ಸಂದರ್ಭದಲ್ಲಿ ಗ್ರಾಹಕ ಹಕ್ಕುಗಳು ನಮಗೆ ಬೆನ್ನೆಲುಬಾಗಿ ನಿಲ್ಲುತ್ತವೆ.ಹೀಗಾಗಿ ಗ್ರಾಹಕರ ಹಕ್ಕುಗಳು ಮತ್ತು ಅಗತ್ಯತೆಗಳ ಬಗ್ಗೆ ಜಾಗತಿಕ ಜಾಗೃತಿ ಮೂಡಿಸಲು, ಗ್ರಾಹಕರ ಹಕ್ಕುಗಳನ್ನು ರಕ್ಷಿಸಲು, ಮಾರುಕಟ್ಟೆಯಲ್ಲಿನ ದುರುಪಯೋಗದ ಬಗ್ಗೆ ಅರಿವು ಮೂಡಿಸಲು ಜಾಗತಿಕವಾಗಿ ಪ್ರತಿ ವರ್ಷ ಮಾರ್ಚ್ 15ರಂದು 'ವಿಶ್ವ ಗ್ರಾಹಕ ಹಕ್ಕುಗಳ ದಿನ'ವನ್ನಾಗಿ ಆಚರಿಸಲಾಗುತ್ತದೆ.

ಗ್ರಾಹಕರ ಚಳವಳಿಗೆ ಗೌರವ ಅರ್ಪಿಸುವುದು ಹಾಗೂ ಗ್ರಾಹಕರ ಮೂಲಭೂತ ಹಕ್ಕುಗಳನ್ನು ಪ್ರೋತ್ಸಾಹಿಸುವುದು ಮತ್ತು ಹಕ್ಕುಗಳ ಬಗ್ಗೆ ಜಾಗೃತಿ ಮೂಡಿಸುವುದು ಈ ದಿನದ ಉದ್ದೇಶವಾಗಿದೆ. ಯುನೈಟೆಡ್ ಸ್ಟೇಟ್ಸ್ ಅಧ್ಯಕ್ಷ ಜಾನ್ ಎಫ್ ಕೆನಡಿ ಮಾರ್ಚ್ 15, 1962ರಂದು ಗ್ರಾಹಕರ ಹಕ್ಕುಗಳ ಕುರಿತು ಯುಎಸ್ ಕಾಂಗ್ರೆಸ್‌ಗೆ ಮಾಡಿದ ಭಾಷಣದಿಂದಾಗಿ ವಿಶ್ವ ಗ್ರಾಹಕರ ದಿನ ಆಚರಣೆಗೆ ಬಂದಿದೆ. ಈ ರೀತಿ ಗ್ರಾಹಕರ ಹಕ್ಕುಗಳ ಬಗ್ಗೆ ಮಾತನಾಡಿದ ಮೊದಲ ವಿಶ್ವ ನಾಯಕ ಜಾನ್ ಎಫ್ ಕೆನಡಿ. ಆ ಬಳಿಕ ವಿಶ್ವ ಗ್ರಾಹಕ ಹಕ್ಕುಗಳ ದಿನವನ್ನು 1983ರಿಂದ ಮಾರ್ಚ್15ರಂದು ಆಚರಿಸಲಾಗುತ್ತಿದೆ.

ಹಣವನ್ನು ಪಾವತಿಸಿ ಅಥವಾ ಪಾವತಿಸುವ ವಾಗ್ದಾನದ ಮೇರೆಗೆ ಸರಕು ಅಥವಾ ಸೇವೆಗಳನ್ನು ಸ್ವಂತ ಅಥವಾ ಅನ್ಯರ ಉಪಯೋಗಕ್ಕಾಗಿ ಖರೀದಿಸುವವನನ್ನು ಗ್ರಾಹಕ ಎಂದು ಕರೆಯುತ್ತಾರೆ. ಆದರೆ ವ್ಯವಹಾರ ಉದ್ದೇಶಗಳಿಗೆ ಸರಕು ಮತ್ತು ಸೇವೆಗಳನ್ನು ಖರೀದಿಸುವವನು ಗ್ರಾಹಕನಾಗುವುದಿಲ್ಲ.

ಗ್ರಾಹಕರ ಹಕ್ಕುಗಳಲ್ಲಿ 8 ವಿಧಗಳನ್ನು ಗುರುತಿಸಬಹುದು. ಸುರಕ್ಷತೆಯ ಹಕ್ಕು, ಮಾಹಿತಿ ಪಡೆಯುವ ಹಕ್ಕು, ಗ್ರಾಹಕರ ಶಿಕ್ಷಣದ ಹಕ್ಕು, ಕುಂದುಕೊರತೆಗಳನ್ನು ನಿವಾರಿಸಿಕೊಳ್ಳುವ ಹಕ್ಕು, ಆಯ್ಕೆಯ ಹಕ್ಕು, ಆಲಿಸುವ ಹಕ್ಕು, ಮೂಲಭೂತ ಅವಶ್ಯಕತೆಗಳನ್ನು ಪಡೆಯುವ ಹಕ್ಕು ಮತ್ತು ಮಾಲಿನ್ಯಮುಕ್ತ ಪರಿಸರವನ್ನು ಪಡೆಯುವ ಹಕ್ಕು.

ಯಾರು ದೂರು ದಾಖಲಿಸಬಹುದು?: ಈ ಕೆಳಕಂಡ ವ್ಯಕ್ತಿಗಳು ಸಂಬಂಧಿಸಿದ ಗ್ರಾಹಕ ನ್ಯಾಯಾಲಯದಲ್ಲಿ ದೂರನ್ನು




ದಾಖಲಿಸಬಹುದು. ಒಬ್ಬ ಗ್ರಾಹಕ, ಯಾವುದೇ ನೊಂದಾಯಿತ ಗ್ರಾಹಕ ಸಂಘಟನೆ, ಗ್ರಾಹಕನ ವಾರಸುದಾರ (ಗ್ರಾಹಕನ ನಿಧನಾನಂತರ), ಒಂದೇ ರೀತಿಯ ಹಿತಾಸಕ್ತಿಯನ್ನು ಹೊಂದಿರುವ ಒಬ್ಬ ಅಥವಾ ಅನೇಕ ಗ್ರಾಹಕರು ಅಥವಾ ಕೇಂದ್ರ ಅಥವಾ ಯಾವುದೇ ರಾಜ್ಯ ಸರ್ಕಾರ.

ದೂರಿನಲ್ಲಿರಬೇಕಾದ ಪ್ರಮುಖ ಅಂಶಗಳು: ದೂರುದಾರರ ಹೆಸರು, ವಿಳಾಸ, ಮತ್ತು ದೂರಿನ ವಿವರ, ಎದುರು ಕಕ್ಷಿದಾರನ ಹೆಸರು, ವಿಳಾಸ, ಮತ್ತು ವಿವರ, ಯಾವ ಸಂದರ್ಭದಲ್ಲಿ ನ್ಯೂನತೆ ಸಂಬಂಧಿಸಿದೆ ಎಂಬುದರ ಬಗ್ಗೆ ಮಾಹಿತಿ, ದೂರಿಗೆ ಸಂಬಂಧಿಸಿದ ಮಾಹಿತಿಗಳನ್ನೊಳಗೊಂಡ ದಾಖಲೆಗಳು, ದೂರುದಾರ ಅಪೇಕ್ಷಿಸುವ ಪರಿಹಾರದ ವಿಧಗಳು ಇತ್ಯಾದಿ.

ಭಾರತದಲ್ಲಿ ಗ್ರಾಹಕರ ಹಿತರಕ್ಷಣಾ ಕಾಯ್ದೆ 1986: ಗ್ರಾಹಕರ ಹಿತಾಸಕ್ತಿಯನ್ನು ಸಂರಕ್ಷಿಸುವ ಉದ್ದೇಶದಿಂದ 1986ರಲ್ಲಿ ಈ ಕಾಯ್ದೆಯನ್ನು ಜಾರಿಗೆ ತರಲಾಯಿತು. ಇದು ದೋಷಪೂರಿತ ವಸ್ತುಗಳು, ಅತೃಪ್ತಿದಾಯಕ ಸೇವೆಗಳು, ಅನುಚಿತ ವ್ಯಾಪಾರಿ ಪದ್ಧತಿಗಳು ಹಾಗೂ ಇತರೆ ಶೋಷಣೆಯ ವಿರುದ್ಧ ಪರಿಣಾಮಕಾರಿ ರಕ್ಷಣೆಯನ್ನು ಗ್ರಾಹಕರಿಗೆ ನೀಡುವ ಉದ್ದೇಶವನ್ನು ಹೊಂದಿದೆ. ಈ ಕಾಯ್ದೆ ಸರಕು ಮತ್ತು ಸೇವೆಗಳ ವಿರುದ್ಧ ದೂರುಗಳಿದ್ದಲ್ಲಿ ಇತ್ಯರ್ಥಪಡಿಸಲು ಕಾಲಮಿತಿಯ ಷರತ್ತನ್ನು ವಿಧಿಸಿದೆ. ಗ್ರಾಹಕರ ಶೋಷಣೆಯ ವಿರುದ್ಧ ಕೇವಲ ಬಿಳಿಹಾಳೆಯಲ್ಲಿ ದೂರನ್ನು ಸಲ್ಲಿಸಬಹುದಾಗಿದೆ. ಈ ಕಾನೂನಿನನ್ವಯ ಜಿಲ್ಲಾ, ರಾಜ್ಯ ಹಾಗೂ ರಾಷ್ಟ್ರಮಟ್ಟದಲ್ಲಿ ಗ್ರಾಹಕರ ದೂರುಗಳ ಪರಿಹಾರ ಸಂಸ್ಥೆಗಳನ್ನು ಸ್ಥಾಪಿಸಲಾಗಿದೆ ಹಾಗೂ ರಾಜ್ಯಮಟ್ಟದಲ್ಲಿ ಗ್ರಾಹಕ ಹಿತರಕ್ಷಣಾ ಮಂಡಳಿಗಳನ್ನು ಸ್ಥಾಪಿಸಲಾಗಿದೆ.

ಗ್ರಾಹಕರ ಹಕ್ಕುಗಳ ಅನ್ವಯ ಮಾರುಕಟ್ಟೆಯಲ್ಲಿ ತನ್ನ ಸರಕಿನ ಮೇಲೆ ಮೋಸ, ವಂಚನೆ ಕಂಡುಬಂದರೆ ಗ್ರಾಹಕ ಸಂರಕ್ಷಣೆ ಕಾಯ್ದೆ ಪ್ರಕಾರವಾಗಿ ಗ್ರಾಹಕ ನ್ಯಾಯಾಲಯಗಳಿಗೆ ದೂರು ಸಲ್ಲಿಸಿ, ಪರಿಹಾರವನ್ನು ಪಡೆಯಬಹುದು. ಗ್ರಾಹಕರ ಹಕ್ಕುಗಳಿಗಾಗಿ ಆಚರಿಸುವ ಈ ದಿನದಂದು ಪ್ರಜ್ಞಾಪೂರ್ವಕ ಗ್ರಾಹಕರಾಗುವುದಾಗಿ ಪ್ರತಿಜ್ಞೆ ಮಾಡೋಣ. ವಿವೇಚನಾಶೀಲ ಗ್ರಾಹಕರಾಗಿ ನಮ್ಮ ಹಕ್ಕುಗಳನ್ನು ಬಳಸಿಕೊಳ್ಳೋಣ.



**– ಬಸವರಾಜ ಎಮ್.ಯರಗುಪ್ಪಿ.**
ಬಿಆರ್‌ಪಿ, ಶಿರಹಟ್ಟಿ- ಲಕ್ಷ್ಮೇಶ್ವರ.

### ಗ್ರಾಹಕನಿಗೆ ದೊರೆಯುವ ಪರಿಹಾರಗಳು

ಗ್ರಾಹಕರ ಹಿತಾರಕ್ಷಣಾ ಕಾಯಿದೆ, 1986ರ ಪ್ರಕಾರ ಶೋಷಿತ ಗ್ರಾಹಕನಿಗೆ ಈ ಕೆಳಕಂಡ ಪರಿಹಾರಗಳು ದೊರೆಯುತ್ತವೆ.

* ಬದಲಿ ಸರಕನ್ನು ನೀಡುವಂತೆ ಒತ್ತಾಯ.
* ಸರಕಿನಲ್ಲಿರುವ ನ್ಯೂನತೆಯನ್ನು ನಿವಾರಿಸಿಕೊಳ್ಳುವುದು.
* ಸರಕಿನ ಮೌಲ್ಯವನ್ನು ವಾಪಸ್ಸು ಪಡೆಯುವುದು.
* ನಷ್ಟ ಪರಿಹಾರವನ್ನು ಪಡೆಯುವ ಅಥವಾ
* ಅನುಚಿತ ವ್ಯಾಪಾರಿ ಪದ್ದತಿಗಳನ್ನು ನಿಲ್ಲಿಸುವುದು.
* ಹಾನಿಕಾರಕ ಸರಕುಗಳನ್ನು ಮುಟ್ಟುಗೋಲು ಹಾಕಿಕೊಳ್ಳುವಂತೆ ಆದೇಶ ನೀಡುವುದು.
* ಹಾನಿಕಾರಕ ಸರಕುಗಳನ್ನು ಮಾರಾಟ ಮಾಡುದಂತೆ ನಿರ್ಬಂಧ ಹೇರುವುದು.

# ಅಂಗನವಾಡಿ ನೂತನ ಕಟ್ಟಡಕ್ಕೆ ಭೂಮಿಪೂಜೆ



**■ ವಿಜಯಸಾಕ್ಷಿ ಸುದ್ದಿ, ಗದಗ**

ತಾಲ್ಲೂಕಿನ ಪಾಪನಾಶಿ ಗ್ರಾಮದ ಅಂಗನವಾಡಿ ಕೇಂದ್ರ ಸಂಖ್ಯೆ 277ರ ನೂತನ ಕಟ್ಟಡ ನಿರ್ಮಾಣಕ್ಕೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಗದಗ ಹಾಗೂ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ 20 ಲಕ್ಷ ರೂಪಾಯಿಗಳು ಅನುದಾನ ಮಂಜೂರಾಗಿದ್ದು, ನೂತನ ಕಟ್ಟಡ ನಿರ್ಮಾಣದ ಭೂಮಿಪೂಜೆಯನ್ನು ಅಡವಿ ಸೋಮಾಪೂರ ಗ್ರಾ.ಪಂ ಅಧ್ಯಕ್ಷೆ ಕೀರ್ತಿ ಪಾಟೀಲ ಮತ್ತು ಉಪಾಧ್ಯಕ್ಷ ಶಾಮಸುಂದರ ಡಂಬಳ ನೆರವೇರಿಸಿದರು.

ಈ ಸಂದರ್ಭದಲ್ಲಿ ಗ್ರಾ.ಪಂ ಸದಸ್ಯರಾದ ಈಶಪ್ಪ ಇಟಗಿ, ಕಮಲಮ್ಮ ಮಾದರ, ಪ್ರೇಮಾ ಹಟ್ಟಿ, ಪಿಡಿಒ ಹಾಗೂ ಗ್ರಾಮದ ಗುರು-ಹಿರಿಯರು ಹಾಜರಿದ್ದರು.

# ಪೂಜ್ಯ ಈಶ್ವರಾನಂದ ಸ್ವಾಮೀಜಿಗಳ ಪುಣ್ಯಾರಾಧನೆ



**■ ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲೆಯ ಬೆಟಗೇರಿ ಹೊರವಲಯದಲ್ಲಿರುವ ಶ್ರೀ ಗುರು ಸಿದ್ದಾರೂಢ ಮಠದ ಗುರೂಜಿಯವರಾದ ಪರಮಪೂಜ್ಯ ಈಶ್ವರಾನಂದ ಸ್ವಾಮೀಜಿಯವರ 13ನೇ ದಿನದ ಪುಣ್ಯಾರಾಧನೆ ಕಾರ್ಯಕ್ರಮ ಬುಧವಾರ ಮಧ್ಯಾಹ್ನ 2 ಗಂಟೆಗೆ ನೆರವೇರಿತು. ಲಿಂಗೈಕ್ಯರಾದ ಗುರೂಜಿಯವರಿಗೆ ಸದ್ಭಕ್ತರಿಂದ ಭಕ್ತಿ ಪೂರ್ವಕವಾಗಿ ಪೂಜೆ, ಧಾರ್ಮಿಕ ಆಚರಣೆಗಳು ನೆರವೇರಿದವು.

ಕಾರ್ಯಕ್ರಮದಲ್ಲಿ ಗದಗ ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕ ಡಿ.ಆರ್. ಪಾಟೀಲ, ಡಾ. ಪಂಡಿತ ಪುಟ್ಟರಾಜ ರೈತ ಸಂಘದ ಸಂಸ್ಥಾಪಕ ಅಧ್ಯಕ್ಷ ಎಂ.ಪಿ. ಮುಳುಗುಂದ, ಪೂಜ್ಯರಾದ ದಯಾನಂದ ಗುರೂಜಿ, ಮುಗಳಖೋಡ ಮಠದ ಪೂಜ್ಯ ಬಸವರಾಜ ಶರಣರು, ಅಬ್ಬಿಗೇರಿಯ ಪ್ರಕಾಶ ಗುರೂಜಿ, ಭೂದಾನಿಗಳಾದ ರಾಮಕೃಷ್ಣ ಪಾಂಡ್ರೆ, ಹಿರಿಯರಾದ ಸಿ.ಜಿ. ಹಿರೇಮಠ, ಎಸ್.ಎಸ್. ಹಳ್ಳಿಕೇರಿ, ಸುಭಾಸ ರೆಡ್ಡಿ ದೇವರಡ್ಡಿ, ಅಣ್ಣಪ್ಪಗೌಡ ದೇಸಾಯಿ, ನಾಗಯ್ಯ ಹೊಂಬಳಮಠ, ವಿಜಯಕುಮಾರ ಜೋಳದ, ರುದ್ರಯ್ಯಸ್ವಾಮಿಗಳು ಹುಬ್ಬಳ್ಳಿ ಮುಂತಾದವರಿದ್ದರು.



**■ ವಿಜಯಸಾಕ್ಷಿ ಸುದ್ದಿ, ಗದಗ**

ತಾಲೂಕಿನ ನರಸಾಪೂರ ಗ್ರಾಮದ ನಾಲತವಾಡ ವೀರೇಶ್ವರ ಶರಣರ ಮಠದಲ್ಲಿ ವೀರೇಶ್ವರ ಶರಣರ ಮಹಾರಥೋತ್ಸವ ಭಕ್ತ ಜನಸಾಗರದ ಮಧ್ಯೆ ಗುರುವಾರ ಅದ್ದೂರಿಯಾಗಿ ನೆರವೇರಿತು. ಶ್ರೀಮಠದ ಶಿವಕುಮಾರ ಶರಣರು ನೇತೃತ್ವ ವಹಿಸಿದ್ದರು.

## ಸೊಲ್ಲಾಪುರದ ಉಪಕುಲಪತಿ ಡಾ.ಮುರನಾಳಿನ ಪಡ್ನವಿಸ್ ಅಧ್ಯಕ್ಷತೆಯ ತಂಡ

# ಸ.ಪ್ರ.ದ ಮಹಿಳಾ ಕಾಲೇಜಿಗೆ ನ್ಯಾಕ್ ಮಂಡಳಿ ಭೇಟಿ

**■ ವಿಜಯಸಾಕ್ಷಿ ಸುದ್ದಿ, ಡಂಬಳ**

ನಗರದ ಸರಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿಗೆ ರಾಷ್ಟ್ರೀಯ ಮೌಲ್ಯಮಾಪನ ಮತ್ತು ಮಾನ್ಯತಾ ಮಂಡಳಿ ನ್ಯಾಕ್ (ಓಂಂಅ) ಪೀರ್ ತಂಡವು 1ನೇ ಚಕ್ರದ ಮಾನ್ಯತೆಯ ಮೌಲ್ಯಮಾಪನಕ್ಕಾಗಿ ಎರಡು ದಿನಗಳ ಕಾಲ ಭೇಟಿಯನ್ನು ನಡೆಸಿತು.

ಸ ೊ ಲ ್ಲಾ ಪ ು ರ ದ ಉಪಕುಲಪತಿಗಳಾದ ಡಾ. ಮುರನಾಳಿನ ಪಡ್ನವಿಸ್ ಅಧ್ಯಕ್ಷತೆ, ಸಂಯೋಜಕರಾಗಿ ದೆಹಲಿ ವಿಶ್ವವಿದ್ಯಾಲಯದ ಡಾ.ಗೀತಾ ಸಿಂಗ್, ಕೇರಳದ ಕೊಟ್ಟಾಯಮ್ ಜೇಸಿಲಿಯಸ್ ಕಾಲೇಜಿನ ನಿವೃತ್ತ ಪ್ರಾಂಶುಪಾಲರಾದ ಜಾಕೋಬ್ ಕುರಿಯನ್, ಪ್ರಾಂಶುಪಾಲರಾದ ಎಮ್.ಯು. ಹಿರೇಮಠ ಮತ್ತು ಐಕ್ಯೂಎಸ್‌ಸಿ ಸಂಯೋಜಕರಾದ ಎಸ್.ಎಚ್. ಬಡೇಖಾನ ಸಂವಾದ ನಡೆಸಿದರು.



ಎನ್‌ಎಸ್‌ಎಸ್, ಚುನಾವಣಾ ಸಾಕ್ಷರತಾ ಕ್ಲಬ್ ಮತ್ತು ಇತರ ಸಮಿತಿಗಳ ಸಂಯೋಜಕರೊಂದಿಗೆ ಸಂವಾದದೊಂದಿಗೆ 2ನೇ ದಿನದ ಭೇಟಿ ಪ್ರಾರಂಭವಾಯಿತು. ನಂತರ ವೃತ್ತಿ ಕೌನ್ಸಲಿಂಗ್ ಸೆಲ್, ಆಂಟಿ ರ್‍ಯಾಗಿಂಗ್ ಸೆಲ್, ಕ್ರೀಡಾ ಕೇಂದ್ರ, ಆಟದ ಮೈದಾನ, ಕುಡಿಯುವ ನೀರಿನ ಸೌಲಭ್ಯಗಳು, ತ್ಯಾಜ್ಯ ನಿರ್ವಹಣೆ ವ್ಯವಸ್ಥೆಗೆ ಬೇಟಿ ನೀಡಿ ಕಾಲೇಜಿನ ಖಾತೆ ವಿಭಾಗ ಮತ್ತು ಕಚೇರಿಯ ದಾಖಲೆ ಪರಿಶೀಲನೆ ನಡೆಸಿದರು.

ಪೀರ್ ತಂಡವು ವಿಷಯವಾರು ಎಚ್‌ಓಡಿಗಳೊಂದಿಗೆ ಸರಣಿ ಸಂವಾದ ನಡೆಸಿತು. ಎಲ್ಲಾ ವಿಭಾಗಗಳ ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು, ಪೋಷಕರು, ಸಲಹಾ ಸಮಿತಿ, ಹಳೆಯ ವಿದ್ಯಾರ್ಥಿಗಳು ಮತ್ತು ಕಾಲೇಜಿನ ಎಲ್ಲಾ ಇತರ ಪಾಲದಾರರು ಕಾಲೇಜಿನ ಸ್ಮಾರ್ಟ್ ರೂಮ್‌ನಲ್ಲಿ ದಾಖಲೆ ಪರಿಶೀಲನೆಗಾಗಿ ಮತ್ತು ಸ್ಥಳದ ಮೌಲ್ಯಮಾಪನಕ್ಕಾಗಿ ತರಗತಿ ಕೊಠಡಿಗಳಿಗೆ, ವಿದ್ಯಾರ್ಥಿನಿಯರ ಸಾಮಾನ್ಯ ಕೊಠಡಿಗೆ ಭೇಟಿ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಡಾ.ಮುರನಾಳಿನ ಪಡ್ನವಿಸ್ ಮಾತನಾಡಿ, ವಿದ್ಯಾರ್ಥಿನಿಯರ ಮತ್ತು ಶಿಕ್ಷಕರ ಮಧ್ಯೆ ಉತ್ತಮ ಸಂಯೋಜನೆಯ ಮೂಲಕ ಶಿಕ್ಷಣ ಪಡೆದುಕೊಳ್ಳುವಲ್ಲಿ ಸಫಲತೆಯನ್ನು ಹೊಂದುವಂತೆ ಮಾಡಿರುವುದು ಪ್ರಶಂಸನೀಯ ಎಂದರಲ್ಲದೆ, ಸಂಸ್ಥೆ ಅಳವಡಿಸಿಕೊಳ್ಳಬೇಕಾದ ಮೌಲ್ಯಯುತ ಸಲಹೆಗಳನ್ನು ನೀಡಿ, ಪ್ರಾಂಶುಪಾಲರಾದ ಎಮ್.ಯು.ಹಿರೇಮಠ ಅವರಿಗೆ ವರದಿಯನ್ನು ಹಸ್ತಾಂತರಿಸಿದರು.

ಪ್ರೊ. ಪ್ರಕಾಶ ಕರಿಗಾರ ಸಮಾರೋಪ ಸಮಾರಂಭ ನಿರ್ವಹಿಸಿದರು. ಕಾಲೇಜಿನ ಐಕ್ಯೂಎಸ್‌ಸಿ ಸಂಯೋಜಕರಾದ ಎಸ್.ಎಚ್. ಬಡೇಖಾನ ಔಪಚಾರಿಕವಾಗಿ ಧನ್ಯವಾದ ಸಲ್ಲಿಸಿದರು. ಪ್ರೊ. ಪಿ.ಜಿ. ದೇಶಪಾಂಡೆ, ಪ್ರೊ. ಎಸ್. ಯು. ಸಜ್ಜನಶೆಟ್ಟರ್, ಡಾ. ಎಸ್. ಕೆ. ಪೂಜಾರ, ಪ್ರೊ. ರೂಪಾ ಶ್ರೀನಿವಾಸ, ಪ್ರೊ. ಮಹಾಲಕ್ಷ್ಮಿ ಹುಟಗಿ, ವ್ಯವಸ್ಥಾಪಕ ಎಫ್.ಎಸ್. ಕರಬುಡ್ಡಿ, ಪ್ರೊ. ಸತೀಶ ಸರ್ವಿ, ಡಾ.ದ್ಯಾಮನ್ನ ಮನಕಟ್ಟಿ, ಪ್ರೊ. ಕೃಷ್ಣಪ್ಪ ಬೆಂತೂರ, ಡಾ.ಸುಜಾತಾ ಬರದೂರ, ಪ್ರೊ. ರಶ್ಮಿ ಹೂಗಾರ, ಪ್ರೊ. ಶ್ರೀದೇವಿ ದಾಸರ, ಪ್ರೊ. ರಿಯಾಜಅಹ್ಮದ ಎಂ.ದೊಡ್ಡಮನಿ, ಸಿಬ್ಬಂದಿ ವರ್ಗ, ವಿದ್ಯಾರ್ಥಿನಿಯರು ಇದ್ದರು.

# ತಂತ್ರಜ್ಞಾನ ಕ್ಷೇತ್ರದಲ್ಲಿ ವಿಫುಲ ಅವಕಾಶ

**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಇಂಜಿನಿಯರಿಂಗ್ ಮತ್ತು ತಂತ್ರಜ್ಞಾನ ಕ್ಷೇತ್ರದಲ್ಲಿ ಆರ್ಟಿಫಿಷಿಯಲ್ ಇಂಟಲಿಜೆನ್ಸಿ ಮತ್ತು ಮಷಿನ್ ಲರ್ನಿಂಗ್‌ನಿಂದ ನೂತನ ಆವಿಷ್ಕಾರ ಸಾಕಷ್ಟು ಬೆಳವಣಿಗೆ ಹೊಂದಿ ಉಪಯುಕ್ತವಾಗಿವೆ ಎಂದು ಐಐಟಿ ಧಾರವಾಡದ ಡಾ. ದೀಲಿಪ ಎ.ಡಿ. ಹೇಳಿದರು.

ಅವರು ಪಟ್ಟಣದ ಶ್ರೀಮತಿ ಕಮಲಾ ಮತ್ತು ವೆಂಕಪ್ಪ ಎಂ.ಅಗಡಿ ಅಭಿಯಾಂತ್ರಿಕ ಮತ್ತು ಮಹಾವಿದ್ಯಾಲಯದಲ್ಲಿ ಇಂಜಿನಿಯರಿಂಗ್ ಮತ್ತು ತಂತ್ರಜ್ಞಾನ ಕ್ಷೇತ್ರದಲ್ಲಿ ಸಂಶೋಧನೆ ಕುರಿತು ಅಂತಾರಾಷ್ಟ್ರೀಯ ಸಮ್ಮೇಳನ ಉದ್ಘಾಟಿಸಿ ಮಾತನಾಡಿದರು.




ಹೊಸ ತಂತ್ರಜ್ಞಾನದ ಪ್ರಭಾವದಿಂದ ಇಂಜಿನಿಯರಿಂಗ್ ಕ್ಷೇತ್ರದಲ್ಲಿ ವಿಫುಲವಾದ ಅವಕಾಶಗಳು ಸಿಗುತ್ತಿವೆ. ಈ ನಿಟ್ಟಿನಲ್ಲಿ ಇಂಜಿನಿಯರಿಂಗ್ ವಿದ್ಯಾರ್ಥಿಗಳು ಕ್ರಿಯಾಶೀಲತೆ, ವಿಶೇಷ ಜ್ಞಾನ, ಪರಿಣತಿ ಹೊಂದಬೇಕು. ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಅಗಡಿ ಇಂಜಿನಿಯರಿಂಗ್ ಕಾಲೇಜು ವಿಶೇಷವಾದ ಸೌಲಭ್ಯ, ಸೂಕ್ತ ವೇದಿಕೆ, ವಾತಾವರಣ ಕಲ್ಪಿಸುತ್ತಿದ್ದು, ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಬೆಂಗಳೂರಿನ ಟೆಕ್ನೋ ಫಾರ್ಚುನ್‌ನ ಮಲ್ಲಿಕಾರ್ಜುನ ಕುಲಕರ್ಣಿ, ರವಿಚಂದ್ರ ಮಸೂತಿ ಮಾತನಾಡಿದರು. ಪ್ರಾಚಾರ್ಯ ಡಾ.ಪರಶುರಾಮ ಬಾರ್ಕಿ ಅಧ್ಯಕ್ಷತೆ ವಹಿಸಿದ್ದರು.

ಸಂಯೋಜಕ ಡಾ.ರಾಜಶೇಖರ ಕುನಬೇವು, ಡಾ.ಸಪ್ಪಾ ಚನ್ನಪ್ಪಗೌಡ್ರ, ಶ್ರದ್ಧಾ ಜುಪತಿಮಠ, ಮೇಘಾ ಪಾಶೆಟ್ಟಿ ಪ್ರೊ.ದಯಾನಂದ ಬಡಿಗಣ್ಣನವರ, ಪ್ರೊ.ಷಣ್ಮುಖ ಜಿ. ಇದ್ದರು.

ಪ್ರೊ.ಪ್ರತಿಮಾ ಮಹಾಪುರುಷ ಸ್ವಾಗತಿಸಿದರು. ಸುಭಾಶ ಮೇಟಿ ವಂದಿಸಿದರು.

# ಶ್ರೀ ಜಗದಂಬಾ ಶಾಲೆಯ ವಿದ್ಯಾರ್ಥಿಗಳ ಸಾಧನೆ

**■ ವಿಜಯಸಾಕ್ಷಿ ಸುದ್ದಿ, ಗದಗ**

ಬಣ್ಣದ ಮನೆ ಸಾಂಸ್ಕೃತಿಕ ವೇದಿಕೆ ಗದಗ ವತಿಯಿಂದ 'ಚಿಣ್ಣರ ಚಿತ್ರ ಚಿತ್ತಾರ' ರಾಜ್ಯಮಟ್ಟದ ಮಕ್ಕಳ ಚಿತ್ರ ಕಲೋತ್ಸವ-2023-24ನೇ ಸಾಲಿನ ಸ್ಪರ್ಧೆಯಲ್ಲಿ ಗದಗ-ಬೆಟಗೇರಿ ಎಸ್‌ಎಸ್‌ಕೆ ಶ್ರೀ ಜಗದಂಬಾ ಪ್ರಾಥಮಿಕ ಮತ್ತು ಪ್ರೌಢಶಾಲೆಯ 40 ವಿದ್ಯಾರ್ಥಿಗಳು ಭಾಗವಹಿಸಿ, ಸ್ಮರಣಕೆ ಹಾಗೂ ಪ್ರಶಸ್ತಿಪತ್ರ ಪಡೆದರು.



ವಿದ್ಯಾರ್ಥಿನಿ ಸಮೃದ್ಧಿ ಅರಸಿದ್ದಿ ವಿಶೇಷ ಸ್ಮರಣಕೆ ಪ್ರಶಸ್ತಿಗೆ ಆಯ್ಕೆಯಾಗಿ ಶಿಕ್ಷಣ ಸಂಸ್ಥೆಗೆ ಕೀರ್ತಿ ತಂದಿದ್ದಾಳೆ. ಚಿತ್ರಕಲೆ ತರಬೇತಿ ನೀಡಿದ ಡಾ. ಜಾಕೀರಹುಸೇನ್ ಎಮ್.ಕೊರ್ಲಹಳ್ಳಿ ಮತ್ತು ಸಾಧಕ ವಿದ್ಯಾರ್ಥಿಗಳಿಗೆ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಲೋಕನಾಥ್ ಬಿ.ಕಬಾಡಿ, ಜಿ.ವಿ. ಬಸವಾ, ವಾಯ್ಸ್ ಚೇರಮನ್ ದತ್ತು ಯು.ಪವಾರ್, ಕಮಿಟಿಯ ಸರ್ವ ಸದಸ್ಯರು, ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಎಸ್.ಡಿ. ಬೆನಕಲ್, ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯ ಸಿ.ಎಸ್. ಹವಳದ ಹಾಗೂ ಶಾಲೆಯ ಸಿಬ್ಬಂದಿ ವರ್ಗದವರು ಅಭಿನಂದಿಸಿದ್ದಾರೆ.

ತಾಲೂಕಾ ಅಧ್ಯಕ್ಷರಾಗಿ ಅಶೋಕ ಮಂದಾಲಿ ನೇಮಕ

# ಗದಗ ತಾಲೂಕು ಮಟ್ಟದ ಗ್ಯಾರಂಟಿ ಸಮಿತಿ ರಚನೆ

■ವಿಜಯಸಾಕ್ಷಿ ಸುದ್ದಿ, ಗದಗ



ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ.ಪಾಟೀಲ ಅವರ ಶಿಫಾರಸ್ಸಿನ ಮೇರೆಗೆ ಗದಗ ತಾಲೂಕು ಮಟ್ಟದ ಗ್ಯಾರಂಟಿ ಸಮಿತಿಗೆ ಪದಾಧಿಕಾರಿಗಳನ್ನು ನೇಮಕಗೊಳಿಸಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಆದೇಶ ಹೊರಡಿಸಿದ್ದಾರೆ.

ತಾಲೂಕು ಮಟ್ಟದ ಗ್ಯಾರಂಟಿ ಸಮಿತಿಯ ಅಧ್ಯಕ್ಷರಾಗಿ ಅಶೋಕ ಮಂದಾಲಿ ನೇಮಕಗೊಳಿಸಲಾಗಿದೆ. ಸಮಿತಿಯ ಸದಸ್ಯರ ವಿವರ ಈ ರೀತಿ ಇದೆ.

ಶಂಭು ಎಸ್ ಕಾಳೆ, ಮೀನಾಕ್ಷಿ ಬೆನಕಣ್ಣವರ, ಸಾವಿತ್ರಿ ಹೂಗಾರ, ದಯಾನಂದ ಪವಾರ, ಸಂಗು ಕೆರಕಲಮಟ್ಟಿ, ನಿಂಗಪ್ಪ ದೇಸಾಯಿ, ಸಂಗಮೇಶ ಹಾದಿಮನಿ, ರಮೇಶ ಹೊನ್ನಿ ನಾಯಕರ, ದೇವರೆಡ್ಡಿ ತಿರ್ಲಾಪುರ, ಮಲ್ಲಪ್ಪ ದಂಡಿನ, ಗಣೇಶಸಿಂಗ್ ಮಿಟಾಡೆ, ಮಲ್ಲಪ್ಪ ಬಾರಕೇರ, ಭಾಷಾ ಮಲ್ಲಸಮುದ್ರ, ಕೃಷ್ಣಗೌಡ ಎಚ್ ಪಾಟೀಲ ಸದಸ್ಯರಾಗಿದ್ದು, ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಗಳು ಸದಸ್ಯ ಕಾರ್ಯದರ್ಶಿಗಳಾಗಿ ನೇಮಕಗೊಳಿಸಲಾಗಿದೆ.

ಸಮಿತಿಯ ಅಧ್ಯಕ್ಷರು ಹಾಗೂ ಸದಸ್ಯರು ಸರ್ಕಾರದ ಆದೇಶದಲ್ಲಿ ತಿಳಿಸಿರುವಂತೆ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳ ಸಮರ್ಪಕ ಅನುಷ್ಠಾನ ಹಾಗೂ ಮೇಲ್ವಿಚಾರಣೆ ಮಾಡಲು ಜಿಲ್ಲಾಧಿಕಾರಿಗಳು ಆದೇಶದಲ್ಲಿ ತಿಳಿಸಿದ್ದಾರೆ.

# ತೋಟಗಾರಿಕೆ ಬೆಳೆಗಳಿಂದ ರೈತರಿಗೆ ಅನುಕೂಲ

▶▶ಮೊದಲನೇ ಪುಟದಿಂದ

ಸಹಾಯಕ ಹಿರಿಯ ತೋಟಗಾರಿಕೆ ನಿರ್ದೇಶಕ ಸುರೇಶ ಕುಂಬಾರ ಮಾತನಾಡಿ, ಮಳೆಯ ಅಭಾವದಿಂದ ನೀರಾವರಿ ಕ್ಷೇತ್ರಗಳು ಕಡಿಮೆಯಾಗುತ್ತಿವೆ. ಆದರೆ ಇರುವ ನೀರಿನಲ್ಲಿಯೇ ತರಕಾರಿ ಬೆಳೆಗಳನ್ನು ಉತ್ತಮವಾಗಿ ಬೆಳೆದು ಅದರಿಂದ ರೈತರು ಲಾಭ ಮಾಡಿಕೊಳ್ಳಬಹುದಾಗಿದೆ. ಅಲ್ಪಾವದಿಯಲ್ಲಿ ತರಕಾರಿ ಬೆಳೆಗಳನ್ನು ಬೆಳೆಯಬಹುದಾಗಿದ್ದು, ರೈತರಿಗೆ ಸುಮಾರು 2 ಸಾವಿರ ರೂ. ಬೆಲೆಯ ತರಕಾರಿ ಬೀಜಗಳನ್ನು ಉಚಿತವಾಗಿ ನೀಡಲಾಗುತ್ತಿದೆ ಎಂದರು.

ಈ ಸಂದರ್ಭದಲ್ಲಿ ಲಕ್ಷ್ಮೇಶ್ವರ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಕೃಷ್ಣಪ್ಪ ಧರ್ಮರ, ತಹಸೀಲ್ದಾರ ವಾಸುದೇವ ಸ್ವಾಮಿ, ಆಡಳಿತಾಧಿಕಾರಿ ಜಗದೇವ ಬಿ. ಮತ್ತು ರೈತರು ಹಾಜರಿದ್ದರು.

'ನಾದ ಬ್ರಹ್ಮನಿಗೆ ನಮನ' ಕಾರ್ಯಕ್ರಮದಲ್ಲಿ ಪ್ರೊ. ಅಶೋಕ ಅಕ್ಕಿ

# ಪಂ. ಪಟ್ಟರಾಜರು ದೈವ ಸ್ವರೂಪಿ

■ವಿಜಯಸಾಕ್ಷಿ ಸುದ್ದಿ, ಗದಗ



ನಾದ ಬ್ರಹ್ಮ ಪುಟ್ಟರಾಜರು ಈ ಶತಮಾನದ ಅಪ್ರತಿಮ ಸಾಧಕರು. ನಮ್ಮ ನಾಡಿನ ಕೀರ್ತಿಯನ್ನು ದೇಶ-ವಿದೇಶಕ್ಕೂ ಪಸರಿಸಿದ ಮಹಾ ಚೇತನ. ದೇವರು ನೊಂದವರ-ಬೆಂದವರ ಬದುಕಿಗೆ ಬೆಳಕು ನೀಡಲು ಬೇರೆ ಬೇರೆ ಅವತಾರಗಳಲ್ಲಿ ಧರೆಗೆ ಬರುತ್ತಾರೆ. ಅದರಂತೆ ಅಂಧ-ಅನಾಥರ ಬದಕನ್ನು ಬೆಳಗಿಸಲು ಡಾ. ಪಂ ಪುಟ್ಟರಾಜ ಗವಾಯಿಗಳನ್ನು ದೇವರು ಕುರುಣಸಿದ ದೈವ ಸ್ವರೂಪಿ. ಅಂತಹ ದೇವ ಮಾನವನ ದರ್ಶನ ಪಡೆದ ನಾವೇ ಪುಣ್ಯವಂತರು ಎಂದು ವಿಜಯ ಲಲಿತಕಲಾ ಸಂಸ್ಥೆಯ ಅಧ್ಯಕ್ಷ ಪ್ರೊ. ಅಶೋಕ ಅಕ್ಕಿ ಅಭಿಪ್ರಾಯಪಟ್ಟರು.

ಇಲ್ಲಿನ ನಿರ್ಮಲ ವಿವಿಧೋದ್ದೇಶಗಳ ಸೇವಾ ಸಂಸ್ಥೆ ಮುಂಡರಗಿ, ನವರಸ ಕಲಾ ಸಂಘ ಬೆಟಗೇರಿ ಹಾಗೂ ನಯನತಾರಾ ಕಲಾ ಸಂಘ ಬೆಟಗೇರಿ ಇವುಗಳ ಸಹಯೋಗದಲ್ಲಿ ನಗರದ ಶ್ರೀ ಎಸ್.ಸಿ. ಪಾಟೀಲ ಸಮೂಹ ಶಾಲೆಗಳ ಭವನದಲ್ಲಿ ಹಮ್ಮಿಕೊಂಡಿದ್ದ 'ನಾದ ಬ್ರಹ್ಮನಿಗೆ ನಮನ' ಕಾರ್ಯಕ್ರಮ, ಕಾವ್ಯ-ಕುಂಚ-ಗಾಯನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಶಿವಲೀಲಾ ಧನ್ನಾ ಬರೆದ 'ಕಾಡ ಕುಸುಮ' ಕವನ ಸಂಕಲವ ಬಿಡುಗಡೆಗೊಳಿಸಿ ಮಾತನಾಡಿದ ಡಾ. ಶಿವಪ್ಪ ಕುರಿ, ಪುಸ್ತಕಗಳು ಕತ್ತಲ ಕೋಣೆಗಳನ್ನು ಸೇರುತ್ತಿವೆ. ಓದುವ ಆಸಕ್ತಿ ಹೆಚ್ಚಿಸಿಕೊಳ್ಳಿ. ಪುಸ್ತಕದ ವಿಷಯದಲ್ಲಿ ನಿರ್ಲಕ್ಷ್ಯ ತೋರಬೇಡಿ. ಪುಸ್ತಕಗಳು ನಿಮ್ಮ ಬದುಕನ್ನು ಬೆಳಗಿಸುವ ದೇವರು ಎಂದರು.

ಮಂಜುನಾಥ ಡೋಣಿ ಬರೆದ 'ಬಾಗಿಲ ಬುತ್ತಿ' ಕವನ ಸಂಕಲನ ಬಿಡುಗಡೆ ಮಾಡಿ ಮಾತನಾಡಿದ ಸಾಹಿತಿ ಆಯ್.ಕೆ ಕಮ್ಮಾರ, ಪುಟ್ಟರಾಜನೆಂಬ ಭೂಲೋಕದ ಭಗವಂತನನ್ನು ಮತ್ತೆಂದೂ ನಾವು ನೋಡುವದಿಲ್ಲ. ಅಂತಹ ಅಸಾಧಾರಣ ಶಕ್ತಿಯನ್ನು ಹೊಂದಿದ ಪುಟ್ಟರಾಜರು ಕವಿ, ಗಾಯಕರಾಗಿ ಕಣ್ಣಿದ್ದವರಿಗಿಂತಲೂ ಅಪಾರ ಸಾಧನೆ ಮಾಡಿದ್ದಾರೆ ಎಂದರು.

ಪುಸ್ತಕ ಪರಿಚಯ ಮಾಡಿದ ಮಂಜುಳಾ ವೆಂಕಟೇಶಯ್ಯ, ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಸಂಸ್ಥೆಯ ಅಧ್ಯಕ್ಷರಾದ ನಿರ್ಮಲಾ ತರವಾಡೆ, ಅಂದಾನೆಪ್ಪ ವಿಭೂತಿ, ಜನಪದ ವಿವಿಯ ಕುಲಸಚಿವ ಶಹಜಹಾನ ಮುದಕವಿ, ಮನ್ ಕಿ ಬಾತ್ ಖ್ಯಾತಿಯ ಕಾವೆಂಶ್ರೀ, ಎಸ್.ಎಫ್ ಕುಕನೂರ, ಬೆಳಕು ಸಂಸ್ಥೆ ರಾಯಚೂರಿನ ಅಣ್ಣಪ್ಪ ಮೇಟಿಗೌಡ, ಮಹೇಂದ್ರ ಕುರ್ಡಿ, ಶರಣಪ್ಪ ಕಡಿ ಜನಪದ ಕಲಾವಿದ ಗವಿಸಿದ್ದಯ್ಯ ಹಳ್ಳಿಕೇರಿಮಠ, ಶಿವಲೀಲಾ ಧನ್ನಾ ಉಪಸ್ಥಿತರಿದ್ದರು.

ಗದಗ ಜಿಲ್ಲಾ ಯುವ ಮೋರ್ಚಾ ಅಧ್ಯಕ್ಷರಾಗಿ ಆಯ್ಕೆಯಾದ ಪ್ರೊ. ಸಂತೋಷ ಅಕ್ಕಿಯವರನ್ನು ಸನ್ಮಾನಿಸಲಾಯಿತು. ನಿರ್ಮಲಾ ತರವಾಡೆ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಅಂಬಣ್ಣ ಪ್ರಾರ್ಥಿಸಿದರು, ಕಾರ್ಯದರ್ಶಿ ಬಸವರಾಜ ನೆಲಜೇರಿ ನಿರೂಪಿಸಿ, ವಂದಿಸಿದರು.

ಕಲಾವಿದರು ಗವಾಯಿಗಳ ಭಾವಚಿತ್ರಗಳನ್ನು ರಚಿಸಿ ಮೆಚ್ಚುಗೆ ಗಳಿಸಿದರು. ಉತ್ತಮ ಕಲಾಕೃತಿಗೆ ಪ್ರೊ. ಅಶೋಕ ಅಕ್ಕಿ ನಗದು ಬಹುಮಾನ ನೀಡಿದರು. ಗಣೇಶ ಸೇವಾ ಸಂಘದ ಗಣೇಶ ಕಬಾಡಿ, ಚೇತಕ ಸಂಸ್ಥೆಯ ಸುನಿತಾ ದೊಡ್ಡಮನಿ, ಮಹಾಂತೇಶ ಬೆರಗಣ್ಣವರ, ರಮೇಶ ಹಾದಿಮನಿ, ತ್ರಿವರ್ಣ, ಸುಭಾಸ ಸುಂಕದ, ಅನಿತಾ ಕೊಪ್ಪಳ, ನಾಗರಾಜ ಮುಖ್ಯೆ, ಡಾ. ಗಣೇಶ ಸುಲ್ತಾನಪೂರ, ಕಸ್ತೂರಿ ಕಡಗದ, ಕುರಹಟ್ಟಿ ಪೇಟಿ, ಯುವಕರ ಬಳಗ ಕಾರ್ಯಕ್ರಮದ ಯಶಸ್ಸಿಗೆ ಶ್ರಮಿಸಿದರು.

> ಗಾನ ಯೋಗಿಗೆ ನಮನ ಸಲ್ಲಿಸಲು ಕವಿಗಳು, ಕಲಾವಿದರು ಹಾಗೂ ಗಾಯಕರು ಆಗಮಿಸಿದ್ದೀರಿ, ಇದು ನಿಮ್ಮ ಪ್ರತಿಭೆಗೊಂದು ವೇದಿಕೆಯಾಗಿದೆ. ಅದರ ಸದುಪಯೋಗದಿಂದ ನಿಮ್ಮ ಪ್ರತಿಭೆ ಬೆಳೆಯಲಿ. ದೇವರ ದ್ಯಾನ, ಕಾಯಕ ನಿತ್ಯ ನಿರಂತರ ಮಾಡುವವನಿಗೆ ಯಾವ ಕೊರತೆಯೂ ಇರುವದಿಲ್ಲ ಎಂದು ಪ್ರೊ. ಅಶೋಕ ಅಕ್ಕಿ ಅಭಿಪ್ರಾಯಪಟ್ಟರು.

# ಸಂಗೀತ ನೃತ್ಯೋಲ್ಲಾಸ ಕಾರ್ಯಕ್ರಮ



■ವಿಜಯಸಾಕ್ಷಿ ಸುದ್ದಿ, ಗದಗ

ಕನ್ನಡ ಮತ್ತು ಕಲಾಭಿವೃದ್ಧಿ ಸೇವಾ ಸಂಸ್ಥೆಯ ಶ್ರೀ ರಾಜೇಶ್ವರಿ ಕಲಾ ಕುಟೀರದ 23ನೇ ವಾರ್ಷಿಕೋತ್ಸವದ ಅಂಗವಾಗಿ ಆಯೋಜಿಸಿದ ಸಂಗೀತ ನೃತ್ಯೋಲ್ಲಾಸ ಕಾರ್ಯಕ್ರಮವನ್ನು ತ್ರಿವಿಧ ದಾಸೋಹಿ ಪೂಜ್ಯಶ್ರೀ ಮನ್ನಿರಂಜನ ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಉದ್ಘಾಟಿಸಿದರು.

ಕಾರ್ಯಕ್ರಮದಲ್ಲಿ ಮಾಜಿ ಸಚಿವ ಎಸ್.ಎಸ್. ಪಾಟೀಲ, ನಿವೃತ್ತ ಪ್ರಾಚಾರ್ಯ ಜಿ.ಬಿ. ಪಾಟೀಲ, ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಶೇಖಣ್ಣ ಕಳಸಾಪೂರ, ಕಲಾ ಕುಟೀರದ ಅಧ್ಯಕ್ಷ ಗಜಾನನ ವೆರ್ಣೇಕರ, ಅಂದಾನಪ್ಪ ವಿಭೂತಿ ಮುಂತಾದವರು ಉಪಸ್ಥಿತರಿದ್ದರು.

# 'ಕಲಾ ವಿಕಾಸ ಪುರಸ್ಕಾರ' ರಾಜ್ಯ ಪ್ರಶಸ್ತಿಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಕಲಾವಿದರ ಮತ್ತು ಕಲಾಪೋಷಕರ ಸಂಘಟನೆಯಾದ ಗದುಗಿನ ಕಲಾ ವಿಕಾಸ ಪರಿಷತ್ ಹಮ್ಮಿಕೊಂಡಿರುವ ಕಲಾ ವಿಕಾಸ ಉತ್ಸವ-2024 ಸಮಾರಂಭದಲ್ಲಿ 24ನೇ ವರ್ಷದ ಪ್ರಶಸ್ತಿ, ಕಲಾ ವಿಕಾಸ ಪುರಸ್ಕಾರ ಪ್ರಶಸ್ತಿಗೆ ಶಾಸ್ತ್ರೀಯ ಸಂಗೀತ (ಗಾಯನ ವಾದನ, ಸುಗಮ ಸಂಗೀತ, ತತ್ವಪದ, ವಚನ ಗಾಯನ, ಜಾನಪದ ಸಂಗೀತ) ಕ್ಷೇತ್ರದಲ್ಲಿ ಮತ್ತು ಶಾಸ್ತ್ರೀಯ ನೃತ್ಯ (ಭರತನಾಟ್ಯ, ಕಥಕ್, ಕುಚುಪುಡಿ, ಮೊದಲಾದ ನೃತ್ಯ) ಪ್ರಕಾರದಲ್ಲಿ ಸಾಧನೆಗೈದ ಕಲಾವಿದರು ಅರ್ಜಿ ಸಲ್ಲಿಸಬಹುದಾಗಿದೆ.

ಈ ಪ್ರಶಸ್ತಿಯು ಗೌರವಧನ, ಪ್ರಶಸ್ತಿ ಫಲಕ, ನೆನಪಿನ ಕಾಣಿಕೆ, ಶಾಲು ಸತ್ಕಾರವನ್ನು ಒಳಗೊಂಡಿರುತ್ತದೆ.

ಆಸಕ್ತ ಕಲಾವಿದರು ತಮ್ಮ ಸಂಪೂರ್ಣ ವಿವರ ಮತ್ತು ಕಲಾ ಪ್ರದರ್ಶನದ ವಿಡಿಯೋ ತುಣುಕುಗಳೊಂದಿಗೆ ವಾಟ್ಸಪ್-9886717732 ನಂಬರಿಗೆ ಅಥವಾ kvpgadag74@gmail.com ಇಮೇಲ್‌ಗೆ ಕಳಿಸಿಕೊಡಬಹುದಾಗಿದೆ. ಪುರಸ್ಕಾರಕ್ಕೆ ಆಯ್ಕೆಯಾದ ಕಲಾವಿದರು ತಮ್ಮ ಕಲಾ ಪ್ರದರ್ಶನ ನಡೆಸಿಕೊಡುವುದು ಕಡ್ಡಾಯವಾಗಿರುತ್ತದೆ ಎಂದು ಕಲಾವಿಕಾಸ ಪರಿಷತ್ ಅಧ್ಯಕ್ಷ ಸಿ.ಕೆ.ಹೆಚ್. ಶಾಸ್ತ್ರೀ (ಕಡಣಿ) ಪತ್ರಿಕಾ ಪ್ರಕಟಣೆಯ ಮೂಲಕ ವಿನಂತಿಸಿಕೊಂಡಿದ್ದಾರೆ.

ಹೈಟೆಕ್ ಶೌಚಾಲಯ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿದ ಶಾಸಕ ಸಿ.ಸಿ. ಪಾಟೀಲ

# ಮೋದಿಯವರನ್ನು ಬಹುಮತದೊಂದಿಗೆ ಗೆಲ್ಲಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ



ಲೋಕಸಭಾ ಚುನಾವಣೆ ಮುಗಿದ ಸಂಜೆ ಒಳಗೆ ರಾಜ್ಯ ಕಾಂಗ್ರೆಸ್ ಸರಕಾರದ ಒಂದೊಂದೇ ಗ್ಯಾರಂಟಿಗಳು ಬಂದ್ ಆಗುತ್ತವೆ ಎಂದು ಮಾಜಿ ಸಚಿವ, ಶಾಸಕ ಸಿ.ಸಿ. ಪಾಟೀಲ ಹೇಳಿದರು.

ಇಲ್ಲಿಯ 3, 8 ಮತ್ತು 9ನೇ ವಾರ್ಡಿನಲ್ಲಿ ಬಾಗಲಕೋಟ ಸಂಸದ ಪಿ.ಸಿ. ಗದ್ದಿಗೌಡರ ಅವರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿಯಲ್ಲಿ ರೂ 49.24 ಲಕ್ಷ ಅನುದಾನದಲ್ಲಿ ಹೈಟೆಕ್ ಶೌಚಾಲಯ ಕಾಮಗಾರಿಯ ಭೂಮಿ ಪೂಜೆ ನೆರವೇರಿಸಿ ಮಾತನಾಡಿದರು.

ಬಡವರಿಗೆ ಗ್ಯಾರಂಟಿ ಕೊಡುವ ಬಗ್ಗೆ ನಮಗೆ ಅಸಮಾದಾನವಿಲ್ಲ. ಆದರೆ ಗ್ಯಾರಂಟಿಗಳನ್ನು ಕೊಡುವ ಭರದಲ್ಲಿ ರಾಜ್ಯದ ಅಭಿವೃದ್ಧಿ ಸಂಪೂರ್ಣ ಕುಂಠಿತಗೊಂಡಿದೆ. ಈ ಗ್ಯಾರಂಟಿಗಳು ಲೋಕಸಭಾ ಚುನಾವಣೆ ಮುಗಿದ 15 ದಿನದೊಳಗೆ ಕಾಂಗ್ರೆಸ್ ಸರಕಾರ ಒಂದೊಂದೇ ಕಾರಣವನ್ನು ನೀಡುತ್ತಾ ಬಂದ್ ಮಾಡುವುದು ನಿಶ್ಚಿತವಾಗಿದೆ. ಕಾರಣ ಸರಕಾರ ಹಣಕಾಸಿನ ತೊಂದರೆ ಅನುಭವಿಸುತ್ತಿದೆ.

ಯುಪಿಎ ಸರಕಾರ ಇದ್ದಾಗ ದೇಶದ ರಕ್ಷಣೆ ಕುಂಠಿತವಾಗಿ ಸೈನಿಕರು ಬಲಿಯಾಗುತ್ತಿದ್ದರು. ಆದರೆ ಮೋದಿಯವರು ಸೈನಿಕರಿಗೆ ಬಲ ತುಂಬಿದ್ದು, ಗಡಿ ಸುರಕ್ಷಿತವಾಗಿದೆ. ನಮ್ಮ ಗಡಿಗಳು ಶಾಂತವಾಗಿವೆ. 2028ರ ಚುನಾವಣೆಗೆ ವಿಧಾನ ಸಭೆಯಲ್ಲಿ ಮಹಿಳೆಯರಿಗೆ ಶೇ.33 ಮೀಸಲು ನೀಡಿದ್ದಾರೆ. ಆದ್ದರಿಂದ ಎಲ್ಲರೂ ಪಕ್ಷ ಬೇಧ ಮರೆತು ನರೇಂದ್ರ ಮೋದಿಯವರನ್ನು ಬಹುಮತದೊಂದಿಗೆ ಗೆಲ್ಲಿಸಬೇಕಾಗಿದೆ ಎಂದರು.

ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ ಮಾತನಾಡಿದರು. ಗ್ರಾ.ಪಂ ಉಪಾಧ್ಯಕ್ಷೆ ಪುಷ್ಪಾ ಪಾಟೀಲ, ಲಕ್ಕುಂಡಿ ಮಂಡಲ ಬಿ.ಜೆ.ಪಿ ಅಧ್ಯಕ್ಷ ನಿಂಗಪ್ಪ ಮಣ್ಣೂರು, ಹಿರಿಯ ಮುಖಂಡ ವಸಂತ ಮೇಟಿ, ಗ್ರಾ.ಪಂ ಸದಸ್ಯರಾದ ರುದ್ರಪ್ಪ ಮುಸ್ಕಿನಭಾವಿ, ಕುಬೇರಪ್ಪ ಬೆಂತೂರ, ವೀರಣ್ಣ ಚಕ್ರಸಾಲಿ, ಮಹಾಂತೇಶ ಕಮತರ, ಬಸವರಾಜ ಹಟ್ಟಿ, ವಿರುಪಾಕ್ಷಿ ಬೆಟಗೇರಿ, ಲಲಿತಾ ಗದಗಿನ, ಲಕ್ಷ್ಮವ್ವ ಭಜಂತ್ರಿ, ಈರಮ್ಮ ಚಬ್ಬರಭಾವಿ, ಮಂಜುಳಾ ಮೆಣಸಿನಕಾಯಿ, ಪಕೀರವ್ವ ಬೇಲೇರಿ, ರಜೀಯಾಬೇಗಂ ತಹಶೀಲ್ದಾರ, ಪ್ರೇಮಾ ಮಟ್ಟಿ ಸೇರಿದಂತೆ ಗ್ರಾಮದ ಗಣ್ಯರು ಉಪಸ್ಥಿತರಿದ್ದರು. ಬಿಜೆಪಿ ಹಿರಿಯ ಮುಖಂಡ ದತ್ತಾತ್ರೇಯ ಜೋಶಿ ನಿರೂಪಿಸಿ ವಂದಿಸಿದರು.

> ವಿ.ಪ ಸದಸ್ಯ ಎಸ್.ವಿ, ಸಂಕನೂರ ಮಾತನಾಡಿ, ಬಹುದಿನದ ಬೇಡಿಕೆಯಂತೆ ಸುಲಭ ಶೌಚಾಲಯ ನಿರ್ಮಾಣ ಕಾಮಗಾರಿಗೆ ಈ ಭಾಗದ ಸಂಸದರಾದ ಪಿ.ಸಿ. ಗದ್ದಿಗೌಡರ ಅವರು ಅನುದಾನ ಒದಗಿಸಿದ್ದು ಸಂತಸ ತಂದಿದೆ. ಇದರೊಂದಿಗೆ ಎರಡು ಸಮುದಾಯ ಭವನಕ್ಕೆ ಸಿ.ಸಿ. ಪಾಟೀಲರು ಅನುದಾನ ಒದಗಿಸಿದ್ದು ಸ್ವಾಗತಾರ್ಹವಾಗಿದೆ ಎಂದರು.

ಸಾಮಾಜಿಕ ಪರಿಶೋಧನೆಯ ಗ್ರಾಮ ಸಭೆಯಲ್ಲಿ ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ ಎಚ್ಚರಿಕೆ

# ಆಕ್ಷೇಪಣೆ ಮೊತ್ತದ ಕಾಮಗಾರಿಯನ್ನು ಸರಿಪಡಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ



ನರೇಗಾ ಯೋಜನೆಯಡಿಯಲ್ಲಿ 2022-23ನೇ ಸಾಲಿನಲ್ಲಿ ಅನುಷ್ಠಾನಗೊಂಡ ವಿವಿಧ ಕಾಮಗಾರಿಗಳಲ್ಲಿ ನಡೆದ ವ್ಯತ್ಯಾಸವನ್ನು ಗುರುತಿಸಿ 1237248 ರೂ, ಹಾಗೂ 15ನೇ ಹಣಕಾಸು ಯೋಜನೆಯಲ್ಲಿ 690457 ರೂ.ಗಳನ್ನು ಆಕ್ಷೇಪಣೆಗೊಳಪಡಿಸಲಾಗಿದೆ.

ಈ ಕುರಿತು ಲಕ್ಕುಂಡಿ ಗ್ರಾ.ಪಂ ಆಶ್ರಯದಲ್ಲಿ ಅನ್ನದಾನೀಶ್ವರ ಸಭಾ ಭವನದಲ್ಲಿ ನಡೆದ ಸಾಮಾಜಿಕ ಪರಿಶೋಧನೆಯ ಗ್ರಾಮ ಸಭೆಯಲ್ಲಿ ನರೇಗಾ ಯೋಜನೆ ತಾಲೂಕಾ ವ್ಯವಸ್ಥಾಪಕ ದಾದಾಪೀರ ತಾಂಬೋಟಿ ವರಣೆ ನೀಡುತ್ತಾ, 2022-23ನೇ ಸಾಲಿನಲ್ಲಿ ಹಳ್ಳ ಹೂಳೆತ್ತುವುದು, ರಸ್ತೆ ಅಭಿವೃದ್ಧಿ, ಚೆಕ್ ಡ್ಯಾಂ ನಿರ್ಮಿಸುವುದು, ಕೈ ತೋಟ ನಿರ್ಮಾಣ ಸೇರಿದಂತೆ ಹಲವಾರು ಕಾಮಗಾರಿಗಳನ್ನು ಕೈಗೊಳ್ಳಲಾಗಿತ್ತು. ಇದರಲ್ಲಿ ಕೂಲಿಗಾಗಿ 13221737 ರೂ, ಹಾಗೂ ಸಾಮಗ್ರಿಗಾಗಿ 1399401 ರೂ ಸೇರಿ ಒಟ್ಟು 14621138 ರೂ.ಗಳ ಕಾಮಗಾರಿ ಕೈಗೊಳ್ಳಲಾಗಿತ್ತು. ಆದರೆ ನಡೆದ 150 ಕಾಮಗಾರಿಗಳಲ್ಲಿ ಚೆಕ್ ಮೇಜರಮೆಂಟ್ ಹಾಗೂ ಕೊಟೇಶನ್ ಇಲ್ಲದೇ 12.37 ಲಕ್ಷ ರೂ.ಗಳನ್ನು ಆಕ್ಷೇಪಣೆಗೆ ಸೇರಿಸಲಾಗಿದೆ. ಇನ್ನೂ ಸರಕಾರಕ್ಕೆ ತೆರಿಗೆ ಪಾವತಿಸದೇ ಇರುವುದಕ್ಕೆ 30458 ರೂ.ಗಳನ್ನು ವಸೂಲಾತಿ ಮಾಡುವಂತೆ ಗ್ರಾಮ ಸಭೆಯಲ್ಲಿ ತೀರ್ಮಾನಿಸಲಾಯಿತು.

ಕಳೆದ ವರ್ಷದ ನಡೆದ ಸಾಮಾಜಿಕ ಪರಿಶೋಧನೆಯಲ್ಲಿ ಕಂಡು ಬಂದ ವಸೂಲಾತಿ, ಆಕ್ಷೇಪಣೆ ಮೊತ್ತದ ಬಗ್ಗೆ ಆದ ಕ್ರಮವೇನು ಎಂಬುದರ ಬಗ್ಗೆ ವಿವರ ನೀಡಬೇಕು ಎಂದು ಗ್ರಾ.ಪಂ ಸದಸ್ಯ ಕುಬೇರಪ್ಪ ಬೆಂತೂರು, ರೈತರಿಗೆ ಉದ್ಯೋಗ ಖಾತ್ರಿ ಯೋಜನೆಯ ಕುರಿತು ಅಪೂರ್ಣ ಮಾಹಿತಿ ನೀಡಿದ್ದರಿಂದ ಸ್ವಂತ ಹಣ ಖರ್ಚು ಮಾಡಿ ಎರಡು ವರ್ಷವಾದರೂ ಹಣ ಪಾವತಿಯಾಗದೇ ನಷ್ಟ ಅನುಭವಿಸುತ್ತಿದ್ದಾರೆ ಎಂದು ಗ್ರಾ.ಪಂ ಹಿರಿಯ ಸದಸ್ಯ ರುದ್ರಪ್ಪ ಮುಸ್ಕಿನಭಾವಿ ಆಕ್ರೋಶ ವ್ಯಕ್ತಪಡಿಸಿದರು.

ನೊಡೆಲ್ ಅಧಿಕಾರಿಯಾಗಿ ಆಗಮಿಸಿದ್ದ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ, ಇಂತಹ ಸಾಮಾಜಿಕ ಪರಿಶೋಧನೆ ಗ್ರಾಮ ಸಭೆಯಿಂದ ಜನರಿಗೆ ತಿಳುವಳಿಕೆ ಮತ್ತು ಪ್ರಶ್ನೆ ಮಾಡುವ ಧೈರ್ಯ ಬರುತ್ತದೆ ಎಂದರು. 6 ದಿನಗಳವರೆಗೆ ತಾಲೂಕಾ ವ್ಯವಸ್ಥಾಪಕ ದಾದಾಪೀರ ತಾಂಬೋಟಿ ಅವರ ನೇತೃತ್ವದಲ್ಲಿ ಮಲ್ಲಪ್ಪ ಬ್ಯಾಗಿ, ಮೈಲಾರಪ್ಪ ಹುಯಿಲಗೋಳ, ಮಂಜುನಾಥ ಹುಡೇದ, ಪವಿತ್ರಾ ಜಕ್ಕಲಿ, ರೇಣುಕಾ ಬಾಣಿ ತಂಡವು ಕಾಮಗಾರಿ ನಡೆದ ಸ್ಥಳಗಳಲ್ಲಿ ಪರಿಶೀಲನೆ ನಡೆಸಿದರು. ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ ಅಧ್ಯಕ್ಷತೆ ವಹಿಸಿದ್ದರು. ಉಪಾಧ್ಯಕ್ಷೆ ಪುಷ್ಪಾ ಪಾಟೀಲ, ಗ್ರಾ.ಪಂ ಸರ್ವ ಸದಸ್ಯರು, ಪಿಡಿಓ ರಾಜಕುಮಾರ ಭಜಂತ್ರಿ, ನರೇಗಾ ಇಂಜಿನಿಯರ್‌ಗಳಾದ ವಿ.ಎಫ್. ಹಾನಾಪೂರ, ಅನಿಲ ಅಬ್ಬಿಗೇರಿ, ಪ್ರಶಾಂತ ಯಾವಗಲ್ಲಮಠ ಉಪಸ್ಥಿತರಿದ್ದರು.

> **ಅಧ್ಯಕ್ಷರ ಎಚ್ಚರಿಕೆ**
>
> ನಮ್ಮ ಗಮನಕ್ಕೆ ಬಾರದೇ ಹಲವಾರು ಕಾಮಗಾರಿಗಳಲ್ಲಿ ವ್ಯತ್ಯಾಸವಾಗಿದ್ದು, ಆಕ್ಷೇಪಣೆಯ ಮೊತ್ತದ ಕಾಮಗಾರಿಯನ್ನು ಸರಿಪಡಿಸಬೇಕು. ಎಲ್ಲ ಕಾಮಗಾರಿಗಳ ಕಡತಗಳು ನನ್ನ ಗಮನಕ್ಕೆ ಬರಬೇಕು. ಬೇಜವಾಬ್ದಾರಿ ಕಾರ್ಯವನ್ನು ಮಾಡುವ ಸಿಬ್ಬಂದಿ, ಅಧಿಕಾರಿಗಳು ಬೇರೆ ಕಡೆ ವರ್ಗಾವಣೆ ಮಾಡಿಕೊಳ್ಳಿ. ಪಾರದರ್ಶಕ, ವಸ್ತುನಿಷ್ಠ ಕಾರ್ಯಗಳು ನೆರವೇರಬೇಕು. ನಮ್ಮ ದಿಕ್ಕು ತಪ್ಪಿಸುವ ಕೆಲಸವಾದರೆ ಸುಮ್ಮನಿರುವುದಿಲ್ಲ ಎಂದು ನರೇಗಾ ಯೋಜನೆಯ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ ಎಚ್ಚರಿಕೆ ನೀಡಿದರು.

# ಸದ್ಭಕ್ತ ರೈತರಿಂದ ಬೆರಣಿ ಸೇವೆ ಸಲ್ಲಿಕೆ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಬಾದಾಮಿ ತಾಲೂಕಿನ ಪ್ರಸಿದ್ಧ ಶಿವಯೋಗ ಮಂದಿರದ ಕಾರಣಿಕ ಯುಗಪುರುಷ ಲಿಂ. ಹಾನಗಲ್ಲ ಗುರುಕುಮಾರೇಶ್ವರ ಮಹಾ ಶಿವಯೋಗಿಗಳವರ ಮಠಕ್ಕೆ ವಿಭೂತಿ ತಯಾರಿಸಲು ಬೇಕಾದ ಶುದ್ಧವಾಗಿರುವ ಬೆರಣಿಯನ್ನು ಸಮೀಪದ ಕೋಟುಮುಚಗಿ ಗ್ರಾಮದ 12 ಜನ ಸದ್ಭಕ್ತ ರೈತರು ಪ್ರತಿ ನಿತ್ಯ ಸ್ವತಃ ತಾವೇ ದೇಶಿ ಗೋವುಗಳ ಸಗಣಿಯನ್ನು ಶೇಖರಿಸಿ 7500ಕ್ಕೂ ಹೆಚ್ಚು ಬೆರಣಿ(ಕುಳ್ಳು)ಗಳನ್ನು ಕಳೆದ 6 ತಿಂಗಳಿಂದ ತಟ್ಟಿ ಸಂಗ್ರಹಿಸಿದ್ದರು.

ಈ ಕುಳ್ಳುಗಳನ್ನು ನಿಡಗುಂದಿಕೊಪ್ಪದ ಶ್ರೀಗಳ ನೇತೃತ್ವದಲ್ಲಿ ಶಿವಯೋಗ ಮಂದಿರಕ್ಕೆ ಶ್ರೀ ದುರ್ಗಾದೇವಿ ಭಜನಾ ಮಂಡಳಿಯೊಂದಿಗೆ ತೆರಳಿ ಅಲ್ಲಿರುವ ವಿಭೂತಿ ತಯಾರಿಕಾ ಘಟಕಕ್ಕೆ ಅರ್ಪಿಸಿದರು.

ಶ್ರೀ ಅಭಿನವ ಚನ್ನಬಸವ ಮಹಾಸ್ವಾಮೀಜಿ ಮಾತನಾಡಿ, ಭಾರತದಲ್ಲಿ ಗೋ ಮಾತೆಗೆ ವಿಶಿಷ್ಠ ಸ್ಥಾನವಿದೆ. ದೇಸೀ ಹಸುವಿನ ಸೆಗಣಿಯಲ್ಲಿ ತಯಾರಿಸಿದ ವಿಭೂತಿಯನ್ನು ಹಣೆಗೆ ಹಚ್ಚಿಕೊಂಡರೆ ಎಲ್ಲ ಪಾಪಗಳೂ ನಾಶವಾಗುತ್ತವೆ ಎನ್ನುವ ನಂಬುಗೆ ಹಿಂದೂಗಳಲ್ಲಿದೆ. ಆದ್ದರಿಂದ ಈ ಗ್ರಾಮದ ರೈತರು ಮಾಡಿರುವ ಈ ಕಾರ್ಯ ಅತ್ಯಂತ ಶ್ಲಾಘನೀಯವಾದದ್ದು ಎಂದರು.

ಹಾವೇರಿ ಹುಕ್ಕೇರಿಮಠದ ಶ್ರೀ ವ್ಯಂದ್ವೀರಶೈವ ಶಿವಯೋಗ ಮಂದಿರದ ಉಪಾಧ್ಯಕ್ಷರಾದ ಶ್ರೀ ಸದಾಶಿವ ಸ್ವಾಮೀಜಿಯವರು ಕೋಟುಮಚಗಿ ಗ್ರಾಮದ ಸದ್ಭಕ್ತರನ್ನು ಶಿವಯೋಗ ಮಂದಿರದಲ್ಲಿ ಆತ್ಮೀಯವಾಗಿ ಸ್ವಾಗತಿಸಿ ಆಶೀರ್ವದಿಸಿದರು. ಬೆರಣಿ ಸಂಗ್ರಹಿಸಿದ ಸದ್ಭಕ್ತರಾದ ವೀರೇಶ ನೇಗಲಿ, ಅಮರೀಷ ಜಗ್ಗಲ್, ಶ್ರೀಕಾಂತ ಸಿಂಗಟಾಲಕೇರಿ, ಮಲ್ಲಪ್ಪ ಗಡಾದ, ಬಸವರಾಜ ಮಡಿವಾಳರ, ಶರಣಪ್ಪ, ಬಸವರಾಜ ಗೋದಿ, ನಿಂಗಪ್ಪ ಕಿರಟಗೇರಿ, ಮಲ್ಲಪ್ಪ ಕಿತ್ತೂರ, ಅಶೋಕ ಬ್ಯಾಹಟ್ಟಿ, ಈಶಪ್ಪ ಜಗ್ಗಲ್, ಸೋಮಣ್ಣ ಕರಡಿ, ಹೊನ್ನಪ್ಪ ಬ್ಯಾಹಟ್ಟಿ ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.

# ರೈತರ ಮೇಲೆ ಕೇಸ್ ದಾಖಲಿಸದಂತೆ ಮನವಿ

■ ವಿಜಯಸಾಕ್ಷಿ ಸುದ್ದಿ, ಗದಗ

ದೇಶದ ಪ್ರತಿಷ್ಠಿತ ಮೆಣಸಿನಕಾಯಿ ಮಾರುಕಟ್ಟೆಯಾದ ಬ್ಯಾಡಗಿಯಲ್ಲಿ, ಬೆಲೆ ಕುಸಿತದಿಂದ ಆದ ಗಲಾಟೆಯಲ್ಲಿ ಅಮಾಯಕ ರೈತರ ಮೇಲೆ ಕೇಸ್ ದಾಖಲಿಸಿ ವಿಚಾರಣೆ ನೆಪದಲ್ಲಿ ರೈತರಿಗೆ ಮಾನಸಿಕ ಹಿಂಸೆ ನೀಡಬಾರದು ಹಾಗೂ ಅವರ ಮೇಲೆ ಯಾವುದೇ ರೀತಿಯ ಕೇಸ್ ದಾಖಲು ಮಾಡಬಾರದು ಎಂದು ಕರ್ನಾಟಕ ರಾಜ್ಯ ರೈತ ಸಂಘದ ಗದಗ ಜಿಲ್ಲಾಧ್ಯಕ್ಷ ಯಲ್ಲಪ್ಪ ಎಚ್.ಬಾಬರಿ ಒತ್ತಾಯಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ವರ್ತಕರು 1 ತಿಂಗಳ ಕಾಲ ಮಾರುಕಟ್ಟೆ ಬಂದ್ ಇರುತ್ತದೆ ಎಂದು ಹೇಳಿದ್ದಾರೆ. ಅದಕ್ಕೆ ಜಿಲ್ಲೆಯ ರೈತ ಬಳಿ ಇನ್ನೂ ಮೆಣಸಿನಕಾಯಿ ಇದ್ದು, ಬೆಲೆ ಕುಸಿತದಿಂದ ಮಾರಾಟ ಮಾಡಿದೆ ಇಟ್ಟುಕೊಂಡಿದ್ದಾರೆ. ಪುನಃ ಮಾರುಕಟ್ಟೆಯಲ್ಲಿ ವ್ಯಾಪಾರ ಪ್ರಾರಂಭ ಮಾಡಬೇಕು ಹಾಗೂ ವ್ಯಾಪಾರಸ್ಥರ ಮೇಲೆ ಹದ್ದಿನ ಕಣ್ಣಿಟ್ಟು ಟ್ರೇಡರ್ ಪ್ರಕ್ರಿಯೆಯಲ್ಲಿ ರೈತರಿಗೆ ಯಾವುದೇ ಮೋಸ ಮಾಡದೆ ಉತ್ತಮ ಬೆಲೆಗೆ ಖರೀದಿ ಮಾಡುವಂತೆ ಸಂಬಂಧಪಟ್ಟ ಎಪಿಎಂಸಿ ಅಧಿಕಾರಿಗಳು ನೋಡಿಕೊಳ್ಳಬೇಕು. ಅನ್ಯ ರಾಜ್ಯದ ಮೆಣಸಿನಕಾಯಿ ಮಾರುಕಟ್ಟೆಗೆ ಬರದಂತೆ ತಡೆದರೆ ನಮ್ಮ ಜಿಲ್ಲೆಯ ರೈತರಿಗೆ ಉತ್ತಮ ಬೆಲೆ ಸಿಗಬಹುದು ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

### ಬೆಂಬಲ ಬೆಲೆ ಯೋಜನೆಯಡಿ ಎಫ್‌ಎಕ್ಯೂ ಗುಣಮಟ್ಟದ ಜೋಳ ಖರೀದಿಗೆ ಬೆಲೆ ನಿಗದಿ

# ಮೇ 31ರವರೆಗೆ ನೋಂದಣಿ ಕಾರ್ಯ

■ ವಿಜಯಸಾಕ್ಷಿ ಸುದ್ದಿ, ಗದಗ

2023-24ನೇ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಎಫ್‌ಎಕ್ಯೂ ಗುಣಮಟ್ಟದ ಜೋಳ ಉತ್ಪನ್ನವನ್ನು ಖರೀದಿಸಲು ಬೆಂಬಲ ಬೆಲೆ ನಿಗದಿಪಡಿಸಲಾಗಿದ್ದು, ಮೇ 31ರವರೆಗೆ ನೋಂದಣಿ ಕಾರ್ಯ ಕೈಗೊಳ್ಳಲಾಗುವುದು. ನೋಂದಣಿ ಪ್ರಕ್ರಿಯೆಯಲ್ಲಿ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಲು ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ತಿಳಿಸಿದರು.

ಜಿಲ್ಲಾಧಿಕಾರಿಗಳ ಸಭಾ ಭವನದಲ್ಲಿ ಗುರುವಾರ 2023-24ನೇ ಸಾಲಿನ ಹಿಂಗಾರು ಋತುವಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಜೋಳ ಕೃಷಿ ಹುಟ್ಟುವಳಿ ಖರೀದಿಸುವ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕೇಂದ್ರ ಸರ್ಕಾರದ ಮಾನದಂಡಗಳನ್ವಯ ಎಫ್‌ಎಕ್ಯೂ ಗುಣಮಟ್ಟವನ್ನು ದೃಢೀಕರಿಸಲು ಕ್ರಮ ವಹಿಸಬೇಕು. ಖರೀದಿ ಏಜನ್ಸಿಯವರು ತಮ್ಮ ಸಂಸ್ಥೆಯ ಹಿರಿಯ ಅಧಿಕಾರಿಗಳು ಮೇಲುಸ್ತುವಾರಿ ತಪಾಸಣೆ ಕೈಗೊಳ್ಳಬೇಕು. ಪ್ರತಿ ಖರೀದಿ ಕೇಂದ್ರಕ್ಕೆ ಗ್ರೇಡರ್‌ಗಳನ್ನು ನೇಮಿಸಬೇಕು. ಪ್ರತಿ ರೈತರಿಂದ ಉತ್ಪಾದನೆಗೆ ಅನುಗುಣವಾಗಿ ಪ್ರತಿ ಎಕರೆಗೆ 20 ಕ್ವಿಂಟಾಲ್‌ನಂತೆ ರೈತ-ರಿಂದ ಅವರು ಹೊಂದಿರುವ ಜಮೀನಿಗೆ ಅನುಗುಣವಾಗಿ ಎಫ್‌ಐಡಿ ಪ್ರಕಾರ ಖರೀದಿಸಲಾಗುವುದು ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ತಿಳಿಸಿದರು.

ಆಹಾರ ಮತ್ತು ನಾಗರಿಕ



ಸರಬರಾಜು ಇಲಾಖೆಯ ಉಪನಿರ್ದೇಶಕ ಡಾ. ಹಂಪಣ್ಣ ಸಜ್ಜನ ಮಾತನಾಡಿ, ಜೋಳ ಉತ್ಪನ್ನ ಖರೀದಿ ನೋಂದಣಿ ಕಾರ್ಯವನ್ನು ಮೇ 31ರವರೆಗೆ ಕೈಗೊಳ್ಳಲಾಗುವುದು. ಪ್ರತಿ ಕ್ವಿಂಟಲ್‌ಗೆ ಜೋಳ-(ಹೈಬ್ರೀಡ್) 3180 ರೂ ಹಾಗೂ ಜೋಳ-(ಮಾಲ್ದಂಡಿ)ಗೆ 3225 ರೂ. ನಿಗದಿಪಡಿಸಲಾಗಿದ್ದು, ಖರೀದಿ ಪ್ರಕ್ರಿಯೆ ಎಪ್ರಿಲ್ 1ರಿಂದ ಮೇ 31ರವರೆಗೆ ಜರುಗಲಿದೆ. ಶಾಖಾ ವ್ಯವಸ್ಥಾಪಕರು ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳ ಶಾಖಾ ಗದಗ ಹಾಗೂ ಶಾಖಾ ವ್ಯವಸ್ಥಾಪಕರು, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳ ನರಗುಂದ ಈ ಎರಡು ಸಂಸ್ಥೆಗಳನ್ನು ಖರೀದಿ ಸಂಸ್ಥೆಗಳನ್ನಾಗಿ ನಿಗದಿಪಡಿಸಲಾಗಿದೆ ಎಂದು ಮಾಹಿತಿ ನೀಡಿದರು.

ಜಿಲ್ಲೆಯ 5 ಕಡೆಗಳಲ್ಲಿ ಖರೀದಿ ಕೇಂದ್ರಗಳನ್ನು ತೆರೆಯಲು ತೀರ್ಮಾನಿಸಲಾಯಿತು. ಸಭೆಯಲ್ಲಿ ಕೃಷಿ ಇಲಾಖೆ, ಎಪಿಎಂಸಿ ಕಾರ್ಯದರ್ಶಿ, ಕೃಷಿ ಮಾರಾಟ ಇಲಾಖೆ, ಕಾನೂನು ಮಾಪನ ಇಲಾಖೆ, ಕೆ.ಎಫ್.ಸಿ.ಎಸ್.ಸಿ ಹಾಗೂ ಮಾರ್ಕೆಟಿಂಗ್ ಫೆಡರೇಶನ್‌ನ ಶಾಖಾ ವ್ಯವಸ್ಥಾಪಕರು, ವಿವಿಧ ಇಲಾಖೆ ಅಧಿಕಾರಿಗಳು ಹಾಜರಿದ್ದರು.

> ಕೇಂದ್ರ ಸರ್ಕಾರದ ಬೆಂಬಲ ಬೆಲೆ ಖರೀದಿ ಮಾರ್ಗಸೂಚಿಗಳನ್ವಯ ಜಿಲ್ಲೆಯ 5 ಕಡೆಗಳಲ್ಲಿ ನಿಗದಿಪಡಿಸಲಾದ ಜೋಳ ಖರೀದಿ ಕೇಂದ್ರಗಳು: ಗದಗ ಎಪಿಎಂಸಿ ಮಾರುಕಟ್ಟೆ ಪ್ರಾಂಗಣ, ಲಕ್ಷ್ಮೇಶ್ವರ ಎಪಿಎಂಸಿ ಪ್ರಾಂಗಣ, ಮುಂಡರಗಿ ಎಪಿಎಂಸಿ ಪ್ರಾಂಗಣ, ನರಗುಂದ ಎಪಿಎಂಸಿ ಮಾರುಕಟ್ಟೆ ಪ್ರಾಂಗಣ, ರೋಣ ಎಪಿಎಂಸಿ ಮಾರುಕಟ್ಟೆ ಪ್ರಾಂಗಣ.

# ಕಾಂಗ್ರೆಸ್ ಬಡವರಿಗಾಗಿಯೇ ಆಡಳಿತ ನಡೆಸುತ್ತಿದೆ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸರ್ಕಾರದ ಕಾರ್ಯಕ್ರಮಗಳು ಇರುವುದು ಬಡವರ ಏಳಿಗೆಗಾಗಿ. ಹಾಗಾಗಿ ಎಲ್ಲಿ ನಿಜವಾಗಿಯೂ ಅಭಿವೃದ್ಧಿಯ ಅವಶ್ಯಕತೆ ಇರುತ್ತದೆಯೋ ಅಲ್ಲಿಗೆ ಬಂದು ಕಾರ್ಯಕ್ರಮಕ್ಕೆ ಚಾಲನೆ ನೀಡುತ್ತಿದ್ದೇವೆ ಎಂದು ರೋಣ ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಅವರು ಪಟ್ಟಣದ 3ನೇ ವಾರ್ಡಿನ ಬುಲ್ಡೋಜರ್ ನಗರದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅನುದಾನದಡಿ ನಡೆದ ರೂ. 50 ಲಕ್ಷ ವೆಚ್ಚದ ಸಿ.ಸಿ. ರಸ್ತೆ ಅಭಿವೃದ್ಧಿ



ಕಾರ್ಯಕ್ರಮದ ಭೂಮಿ ಪೂಜೆ ನೆರವೇರಿಸಿ ಮಾತನಾಡಿದರು.

ಗ್ಯಾರಂಟಿ ಯೋಜನೆಗಾಗಿ ಸಾಕಷ್ಟು ಖರ್ಚಾಗುತ್ತಿದ್ದರೂ ಸಹ ಯಾವುದೇ ಅಭಿವೃದ್ಧಿ ಕಾರ್ಯಗಳು ರಾಜ್ಯದಲ್ಲಿ ಹಾಗೂ ರೋಣ ಮತ ಕ್ಷೇತ್ರದಲ್ಲಿ ನಿಂತಿಲ್ಲ. ಯಾಕೆಂದರೆ ಇದು ಬಡವರಿಗಾಗಿ, ಬಡವರಿಗೋಸ್ಕರ ಆಡಳಿತಕ್ಕೆ ಬಂದಿರುವ ಕಾಂಗ್ರೆಸ್ ಸರ್ಕಾರವಾಗಿದೆ ಎಂದು ಹೇಳಿದರು.

ಕಾಂಗ್ರೆಸ್ ಪಕ್ಷದ ಶಹರ ಘಟಕದ ಅಧ್ಯಕ್ಷ ಶಿವನಗೌಡ ಪಾಟೀಲ ಮಾತನಾಡಿ, ಜಿ.ಎಸ್. ಪಾಟೀಲರು ಶಾಸಕರಾಗಿ ಆಯ್ಕೆಯಾದಾಗ ಮಾತ್ರ ಬುಲ್ಡೋಜರ್ ನಗರಕ್ಕೆ ಅಭಿವೃದ್ಧಿ ಕಾರ್ಯಗಳನ್ನು ಕೈಗೊಂಡಿರುವುದು ಇಲ್ಲಿನ ಜನರು ನೋಡುತ್ತಿದ್ದಾರೆ. ಹಾಗಾಗಿ ಪ್ರತೀ ಬಾರಿ ಕಾಂಗ್ರೆಸ್ ಪಕ್ಷಕ್ಕೆ ಈ ವಾರ್ಡಿನ ಜನರು ಆಶೀರ್ವಾದ ಮಾಡುತ್ತಾರೆ ಎಂದರು.

ಮುಖಂಡರಾದ ಶೇಖಪ್ಪ ಕೆಂಗಾರ, ಹನಮಂತಪ್ಪ ಅಬ್ಬಿಗೇರಿ, ದಾದಾಸಾಬ್ ನದಾಫ್, ಸಂತೋಷ ಹನಮಸಾಗರ, ಮುತ್ತಪ್ಪ ನೂಲ್ಕಿ, ಬಸವರಾಜ, ಶೇಖಪ್ಪ ಜುಟ್ಲ, ಮೈಲಾರಪ್ಪ ವೀ.ಚಳ್ಳಮರದ, ಕಳಕನಗೌಡ ಪೊಲೀಸ್ ಪಾಟೀಲ, ರೇಣುಕಾ ಧರ್ಮಾಯತ ಇದ್ದರು.

# ಶ್ರೀ ಕರಿಯಮ್ಮದೇವಿ ಜಾತ್ರಾ ಮಹೋತ್ಸವದ ಪೂರ್ವಭಾವಿ ಸಭೆ



■ ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ಕರಿಯಮ್ಮದೇವಿ ದೇವಸ್ಥಾನ ಸುಧಾರಣಾ ಸಮಿತಿ, ಶ್ರೀ ಕರಿಯಮ್ಮದೇವಿ ಜಾತ್ರಾ ಮಹೋತ್ಸವ ಸಮಿತಿ ವತಿಯಿಂದ ಶ್ರೀ ಕರಿಯಮ್ಮದೇವಿ ಜಾತ್ರಾ ಮಹೋತ್ಸವದ ಅಂಗವಾಗಿ ಪೂರ್ವಭಾವಿ ಸಭೆ ಜರುಗಿತು.

ದೇವಸ್ಥಾನ ಸುಧಾರಣಾ ಸಮಿತಿಯ ಅಧ್ಯಕ್ಷ ಸಿ.ಕೆ. ಮಾಳಶೆಟ್ಟಿ ಮಾತನಾಡಿ, ಈ ವರ್ಷ ಏಪ್ರಿಲ್ 5ರಂದು ಮಂಗಲವಾದ್ಯಗಳೊಂದಿಗೆ ಕಳಸದ ಮೆರವಣಿಗೆ ಹಾಗೂ ಏಪ್ರಿಲ್ 9ರ ಸಾಯಂಕಾಲ 5.30 ಗಂಟೆಗೆ ಮಹಾರಥೋತ್ಸವ ಜರುಗುವುದು ಎಂದು ಹೇಳಿದರು.

ಸಮಿತಿಯ ಗೌರವಾಧ್ಯಕ್ಷರು ಹಾಗೂ ಗದಗ-ಬೆಟಗೇರಿ ನಗರಸಭೆಯ ವಿರೋಧ ಪಕ್ಷದ ನಾಯಕರಾದ ಎಲ್.ಡಿ. ಚಂದಾವರಿ ಮಾತನಾಡಿ, ರಥೋತ್ಸವದ ನಂತರ ಮನರಂಜನೆ ಕಾರ್ಯಕ್ರಮಗಳು ಜರುಗಲಿವೆ. ಏ.10ರ ಮಧ್ಯಾಹ್ನ 1 ಗಂಟೆಗೆ ಮಹಾಅನ್ನಸಂತರ್ಪಣೆ ಹಾಗೂ ಸಂಜೆ 5.30ಕ್ಕೆ ಕಡುಬಿನ ಕಾಳ ಜರುಗುವುದು ಎಂದರು.

ನಗರಸಭೆಯ ವಾರ್ಡ್ ನಂ.12ರ ಸದಸ್ಯೆ ವಿಜಯಲಕ್ಷ್ಮೀ ದಿಂಡೂರ ಮಾತನಾಡಿ, ಮಹಾರಥೋತ್ಸವ ಹಾಗೂ ಇನ್ನಿತರ ಕಾರ್ಯಕ್ರಮಗಳಲ್ಲಿ ಭಕ್ತರೆಲ್ಲರೂ ಭಾಗವಹಿಸಿ ಶೋಭೆ ತಂದು ಶ್ರೀ ಕರಿಯಮ್ಮದೇವಿಯ ದರ್ಶನಾಶೀರ್ವಾದ ಪಡೆದುಕೊಳ್ಳಬೇಕೆಂದು ವಿನಂತಿಸಿಕೊಂಡರು.

ಈ ಸಂದರ್ಭದಲ್ಲಿ ಜಾತ್ರಾ ಕಮಿಟಿಯ ಅಧ್ಯಕ್ಷ ಜಗದೀಶ ಪೂಜಾರ, ವಾಯ್.ಕೆ. ಪಿಡಗಣ್ಣವರ, ಎ.ಟಿ. ನರೇಗಲ್ಲ, ಹೆಚ್.ಬಿ. ಶಿರಗುಪ್ಪಿ, ಎಸ್.ಎ. ಹೊಳೆಯಣ್ಣವರ, ಶಶಿಧರ ದಿಂಡೂರ, ಪಿಎಸ್ಐ ವಿಜಯಕುಮಾರ ತಳವಾರ, ಭುವನೇಶ್ವರಿ ಹಿರೇಮಠ, ಬಸವಣ್ಣೆವ್ವ ಪಿಡಗಣ್ಣವರ, ಕಿರಣ ಆರಟ್ಟಿ, ಮುತ್ತು ಮಲ್ಲಾಪೂರ, ಎಂ.ಡಿ. ದೇಸಾಯಿ, ಬಿ.ಎಸ್. ಕಂಠಿ, ಶಶಿಧರ ಕುರಿ ಸೇರಿದಂತೆ ಜಾತ್ರಾ ಕಮಿಟಿಯ ಸದಸ್ಯರು, ಹಿರಿಯರು ಉಪಸ್ಥಿತರಿದ್ದರು.

### ಧರ್ಮ ಜಾಗೃತಿ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಧರ್ಮ, ದೇಶ ಮನುಷ್ಯನ ಎರಡು ಕಣ್ಣುಗಳು

■ ವಿಜಯಸಾಕ್ಷಿ ಸುದ್ದಿ, ಜಗಳೂರು

ವೈಚಾರಿಕತೆಯ ಬಿರುಗಾಳಿಯಲ್ಲಿ ಭಾರತೀಯ ಸಂಸ್ಕೃತಿ ನಾಶಗೊಳ್ಳಬಾರದು. ಧರ್ಮ ಮತ್ತು ದೇಶ ಮನುಷ್ಯನ ಎರಡು ಕಣ್ಣುಗಳಿದ್ದಂತೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಗುರುವಾರ ತಾಲೂಕಿನ ಕೊಡದಗುಡ್ಡ ಶ್ರೀ ವೀರಭದ್ರೇಶ್ವರ ಸ್ವಾಮಿ ಹೆಸರಿನಲ್ಲಿ ನಿರ್ಮಿಸಿದ ಯಾತ್ರಿ ನಿವಾಸ ಉದ್ಘಾಟನೆ ಮತ್ತು ಕಲ್ಯಾಣ ಮಂಟಪದ ಶಿಲಾನ್ಯಾಸ ಅಂಗವಾಗಿ ಜರುಗಿದ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಭಗವಂತನಿತ್ತ ಸಂಪತ್ತು ನಿಜವಾದ ಸಂಪತ್ತು. ದೇವರು ಎಲ್ಲರಲ್ಲೂ ಇರುವನು. ಆದರೆ ಎಲ್ಲರೂ ದೇವರಲ್ಲಿ ಇಲ್ಲ. ಸಕಲ ಭೋಗ, ಮೋಕ್ಷಗಳಿಗೆ ಧರ್ಮವೇ ಮೂಲ. ಸುಖದ ಮೂಲ ಧರ್ಮಾಚರಣೆಯಲ್ಲಿದೆ. ಪರಿಪೂರ್ಣದೆಡೆಗೆ ಕರೆದೊಯ್ಯುವುದೇ ನಿಜವಾದ ಧರ್ಮ. ಬಾಳಿನ ಭಾಗ್ಯೋದಯಕ್ಕೆ ಧರ್ಮದ



ಬೆಳಕು ಬೇಕು. ಸಮರ ಜೀವನ ಅಮರ ಜೀವನವಾಗಲು ಸಂಸ್ಕಾರ, ಸದ್ವಿಚಾರಗಳ ಅವಶ್ಯಕತೆಯಿದೆ. ಜೀವನ ಮೌಲ್ಯಗಳನ್ನು ಸಂಪಾದಿಸಿಕೊಂಡು ಸನ್ಮಾರ್ಗದಲ್ಲಿ ನಡೆಯುವುದೇ ನಿಜವಾದ ಧರ್ಮ ಎಂದು ಶ್ರೀ ಜಗದ್ಗುರು ರೇಣುಕಾಚಾರ್ಯರು ಸಿದ್ಧಾಂತ ಶಿಖಾಮಣಿ ಧರ್ಮ ಗ್ರಂಥದಲ್ಲಿ ನಿರೂಪಿಸಿದ್ದಾರೆ. ಮನುಷ್ಯನಿಗೆ ಹೆತ್ತ ತಾಯಿ, ಹೊತ್ತ ನೆಲ ಎಷ್ಟು ಮುಖ್ಯವೋ ಅಷ್ಟೇ ಧರ್ಮವೂ ಮುಖ್ಯವೆಂಬುದನ್ನು ಮರೆಯಬಾರದು. ಕೊಡದಗುಡ್ಡ ಶ್ರೀ ವೀರಭದ್ರೇಶ್ವರ ಸ್ವಾಮಿ ಕ್ಷೇತ್ರದಲ್ಲಿ ಸಾಕಷ್ಟು ಅಭಿವೃದ್ಧಿ ಕಾರ್ಯಗಳು ನಡೆದಿರುವುದು ತಮಗೆ ಅತೀವ ಸಂತೋಷ ತಂದಿದೆ ಎಂದರು.

ಸಾನ್ನಿಧ್ಯ ವಹಿಸಿದ ಶ್ರೀ ಹಿಮವತ್ಕೇದಾರ ಜಗದ್ಗುರು ರಾವಲ್ ಪದವಿಭೂಷಿತ ಶ್ರೀ ಭೀಮಾಶಂಕರಲಿಂಗ ಶಿವಾಚಾರ್ಯ ಭಗವತ್ಪಾದರು ತಮ್ಮ ಆಶೀರ್ವಚನದಲ್ಲಿ, ಧರ್ಮದ ದಿಕ್ಸೂಚಿ ಇಲ್ಲದೇ ಇದ್ದರೆ ಬದು-ಕಿಗೆ ಅರ್ಥವೇ ಇಲ್ಲ. ಸಮೃದ್ಧ, ಸದೃಢ ನಾಡು ಕಟ್ಟುವುದೇ ಧರ್ಮ ಪೀಠಗಳ ಗುರಿಯಾಗಿದೆ. ಶಿವಾಗಮಗಳು ವೀರಶೈವ ಧರ್ಮ ಸಾಹಿತ್ಯದ ಮೂಲ ಬೇರುಗಳು. ಜೀವನದ ಜಂಜಡದಲ್ಲಿ ಸಿಲುಕಿರುವ ಮನುಷ್ಯನಿಗೆ ಪುಣ್ಯ ಕ್ಷೇತ್ರಗಳು ಸ್ಫೂರ್ತಿ ಮತ್ತು ಚೈತನ್ಯವನ್ನು ನೀಡುವ ಕೇಂದ್ರಗಳಾಗಿವೆ ಎಂದರು.

ನೇತೃತ್ವ ವಹಿಸಿದ ಕಣ್ವಕುಪ್ಪೆ ಗವಿಮಠದ ಡಾ. ನಾಲ್ವಡಿ ಶಾಂತಲಿಂಗ ಶಿವಾಚಾರ್ಯ ಸ್ವಾಮಿಗಳು, ರಾಮಘಟ್ಟ ಪುರವರ್ಗ ಮಠದ ರೇವಣಸಿದ್ಧ ಶಿವಾಚಾರ್ಯ ಸ್ವಾಮಿಗಳು, ಹಾಗೂ ಶಿರಾಳಕೊಪ್ಪದ ಸಿದ್ಧೇಶ್ವರ ದೇವರು ಸಮಾರಂಭದಲ್ಲಿ ಪಾಲ್ಗೊಂಡು ಪಾತನಾಡಿದರು.

ಶಾಸಕ ಬಿ.ದೇವೇಂದ್ರಪ್ಪ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು. ದೇವೀಕೆರೆ ಜೆ.ಆರ್. ರವಿಚಂದ್ರ., ಡಿ.ಎಂ. ರುದ್ರಯ್ಯ, ಬಿಳಿಚೋಡು ಶೆಟ್ರು ಕೆ.ವೀರಣ್ಣ, ಕೋರಿ ಪ್ರಭುಲಿಂಗಪ್ಪ, ಸುರೇಶಗೌಡ್ರು, ಜೆ.ಎಸ್. ಶಿವನಗೌಡ್ರು, ಯು.ಜಿ. ಸಿವಕುಮಾರ್, ಮಂಜುನಾಥ, ನಾಗರತ್ನ ಮಲ್ಲೇಶಪ್ಪ ಪಾಲ್ಗೊಂಡು ಉಭಯ ಜಗದ್ಗುರುಗಳಿಂದ ಗೌರವ ಗುರುರಕ್ಷೆ ಸ್ವೀಕರಿಸಿದರು. ಬಿ.ಎಸ್. ಮಲ್ಲಿಕಾರ್ಜುನ ಮೊದಲ್ಗೊಂಡು ಪದಾಧಿಕಾರಿಗಳು ಉಪಸ್ಥಿತರಿದ್ದರು. ಡಿ.ಸಿ. ರುದ್ರಸ್ವಾಮಿ ಸ್ವಾಗತಿಸಿದರು. ಮಲ್ಲಿಕಾರ್ಜುನಯ್ಯ ನಿರೂಪಿಸಿದರು.

> ಸಮಾರಂಭಕ್ಕೂ ಮುನ್ನ ಬಸವಾಪುರದ ಶ್ರೀ ಆಂಜನೇಯ ಸ್ವಾಮಿ ದೇವಸ್ಥಾನದಿಂದ ಕೊಡದಗುಡ್ಡದ ಶ್ರೀ ವೀರಭದ್ರೇಶ್ವರ ಕಲ್ಯಾಣ ಮಂಟಪದವರೆಗೆ ಶ್ರೀ ರಂಭಾಪುರಿ ಜಗದ್ಗುರುಗಳ ಮತ್ತು ಶ್ರೀ ಕೇದಾರ ಜಗದ್ಗುರುಗಳವರ ಅಡ್ಡಪಲ್ಲಕ್ಕಿ ಮಹೋತ್ಸವ ನೆರವೇರಿತು. ಉತ್ಸವದಲ್ಲಿ ಕುಂಭ ಹೊತ್ತ ಮಹಿಳೆಯರು, ಆರತಿ ಹಿಡಿದ ಸುಮಂಗಲೆಯರು, ಡೊಳ್ಳು, ವೀರಗಾಸೆ ಮತ್ತು ಭಜನಾ ಮಂಡಳದ ಸದಸ್ಯರು ಪಾಲ್ಗೊಂಡು ಮೆರವಣಿಗೆಗೆ ಮೆರಗು ತಂದರು.

# ಸಂಕನೂರ ಶುಶ್ರೂಷಾ ಸಂಸ್ಥೆಯಲ್ಲಿ ಮಹಿಳಾ ದಿನಾಚರಣೆ




■ ವಿಜಯಸಾಕ್ಷಿ ಸುದ್ದಿ, ಗದಗ

ಮಹಿಳಾ ದಿನಾಚರಣೆ ಎಂದರೆ ಗಂಡು-ಹೆಣ್ಣು, ಮೇಲು-ಕೀಳು ಎಂದು ವಾದ ಮಾಡದೇ ಹೆಣ್ಣು ಗಂಡಿಗಿಂತ ಹೇಗೆ ವಿಭಿನ್ನ ಎಂಬುದನ್ನು ಅರಿತುಕೊಳ್ಳುವುದೇ ಆಗಿದೆ. ಅದೇ ರೀತಿ ನಮ್ಮ ಸಾಧನೆಗೆ ಸ್ಫೂರ್ತಿಯಾದ ಮತ್ತು ಸಾಧನೆಯ ದಾರಿಯನ್ನು ಸುಗಮಗೊಳಿಸಿದ ನಮ್ಮ ಇಂದಿನ ಮಹಿಳಾ ಸಾಧನೆಯನ್ನು ನೆನಪಿಸಿಕೊಳ್ಳುವುದೇ ಮಹಿಳಾ ದಿನಾಚರಣೆಯಾಗಿದೆ ಎಂದು ಅರಣ್ಯ ಸಂರಕ್ಷಣಾಧಿಕಾರಿ ದೀಪಿಕಾ ಬಾಜಪೇಯಿ ಅಭಿಪ್ರಾಯಪಟ್ಟರು.

ಮಹಿಳಾ ದಿನಾಚರಣೆ ಅಂಗವಾಗಿ ನಗರದ ಸಂಕನೂರ ಶುಶ್ರೂಷಾ ಸಂಸ್ಥೆಯಲ್ಲಿ ಹಮ್ಮಿಕೊಂಡಿದ್ದ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಅಧ್ಯಕ್ಷತೆ ವಹಿಸಿದ್ದ ಶ್ವೇತಾ ಸಂಕನೂರ ಮಾತನಾಡಿ, ಮಹಿಳೆಯು ಮನೆಯ ಜವಾಬ್ದಾರಿ ವಹಿಸಿಕೊಂಡು ತನ್ನ ಗುರಿ ತಲುಪುವವರೆಗೆ ಬಿಡುವುದಿಲ್ಲ. ಅವಳ ಸಾಧನೆ, ಕೆಲಸಗಳನ್ನು ನಾವು ಗೌರವಿಸುವುದೇ ನಿಜವಾದ ಸ್ತ್ರೀಪೂಜೆಯಾಗಿದೆ ಎಂದರು.

ಪ್ರಾಂಶುಪಾಲರಾದ ಡಾ. ಮೀನಾಕ್ಷಿ ದೇವಾಂಗಮಠ ಮಾತನಾಡಿ, ಮಹಿಳೆಯರು ಎಲ್ಲ ಕಾರ್ಯಕ್ಷೇತ್ರಗಳಲ್ಲೂ ಮುಂಚುಣಿಯಲ್ಲಿದ್ದಾರೆ ಎಂದರು. ಉಪನ್ಯಾಸಕಿ ಕವಿತಾ ಪವಾರ ಅತಿಥಿಗಳನ್ನು ಪರಿಚಯಿಸಿದರು. ಬಸವರಾಜ ಲಮಾಣಿ ಸ್ವಾಗತಿಸಿದರು. ಗುರುಕಿರಣ ನಿರೂಪಿಸಿದರು. ಮುಸ್ತಫಾ ಮುಲ್ಲಾ ವಂದಿಸಿದರು.

### ಅಬ್ಬಿಗೇರಿಯಲ್ಲಿ ಯಶಸ್ವಿನಿ ಯೋಜನೆಯ ನೋಂದಣಿ ಅಭಿಯಾನ

# ಯಶಸ್ವಿನಿ ಯೋಜನೆಯ ಸದುಪಯೋಗ ಪಡೆಯಿರಿ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಾರ್ವಜನಿಕರು ಯಶಸ್ವಿನಿ ಯೋಜನೆಗೆ ನೋಂದಾಯಿಸಿಕೊಂಡು ಸದುಪಯೋಗ ಪಡೆದುಕೊಳ್ಳಿ ಎಂದು ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ನೂತನ ಅಧ್ಯಕ್ಷ ಸಿದ್ದು ಹನಮನಾಳ ಕರೆ ನೀಡಿದರು.

ಅವರು ಸಮೀಪದ ಅಬ್ಬಿಗೇರಿ ಗ್ರಾಮದ ಸಂತೆ ಬಜಾರದಲ್ಲಿ ಸ್ಥಳೀಯ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ವತಿಯಿಂದ ನಡೆದ ವಿಶೇಷ ಯಶಸ್ವಿನಿ ಯೋಜನೆಯ ನೋಂದಣಿ ಅಭಿಯಾನ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಯಶಸ್ವಿನಿ ಯೋಜನೆಗೆ ನೋಂದಣಿ ಮಾಡಿಕೊಂಡಲ್ಲಿ ಅನಾರೋಗ್ಯಕ್ಕೀಡಾದಾಗ ಹತ್ತಿರದ ತಾಲೂಕು ಹಾಗೂ



ಜಿಲ್ಲಾ ಕೇಂದ್ರಗಳಲ್ಲಿನ ಪ್ರತಿಷ್ಠಿತ ನೋಂದಾಯಿತ ಆಸ್ಪತ್ರೆಗಳಲ್ಲಿ ಸಂಪೂರ್ಣ ಉಚಿತವಾಗಿ ಚಿಕಿತ್ಸೆಯನ್ನು ಪಡೆದುಕೊಳ್ಳಬಹುದು. ಆದರೆ ಅನೇಕ ಜನರು ತಪ್ಪು ತಿಳುವಳಿಕೆಯಿಂದ ಇದರ ಪ್ರಯೋಜನ ಪಡೆದುಕೊಳ್ಳದೆ ಹಣ ಕಳೆದುಕೊಳ್ಳುತ್ತಾರೆ. ನಮ್ಮ ಸಂಘದ ಪ್ರತಿಯೊಬ್ಬ ಸದಸ್ಯರೂ ಯಶಸ್ವಿನಿ ಯೋಜನೆಗೆ ಸೇರ್ಪಡೆಗೊಂಡು ಇದರ ಪ್ರಯೋಜನ ಪಡೆದುಕೊಳ್ಳಬೇಕೆಂದು ಮನವಿ ಮಾಡಿದರು.

ನಿಕಟಪೂರ್ವ ಅಧ್ಯಕ್ಷ ಅಜ್ಜಪ್ಪಗೌಡ ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿ, ಕಳೆದ ವರ್ಷ ಗದಗ ಜಿಲ್ಲೆಯಲ್ಲಿಯೇ ಎರಡನೇ ಹೆಚ್ಚು ಸದಸ್ಯರನ್ನು ನಮ್ಮ ಸಂಘ, ಯೋಜನೆ ವ್ಯಾಪ್ತಿಗೆ ಒಳಪಡಿಸಿತ್ತು. ಅದರಂತೆ ಈ ವರ್ಷ ಕೂಡಾ ಗುರಿ ಸಾಧನೆಯತ್ತ ಗಮನ ಹರಿಸಿ, ವಿಶೇಷ ಅಭಿಯಾನ ಕೈಗೊಳ್ಳಲಾಗಿದೆ. ಈ ಯೋಜನೆಗೆ ಮಾರ್ಚ್ 31 ಕೊನೆಯ ದಿನವಾಗಿದ್ದು, ಇದರ ಪ್ರಯೋಜನ ಪಡೆಯಬೇಕು ಎಂದರು.

ಮುಖ್ಯ ಅತಿಥಿಗಳಾಗಿ ಡಾ. ಆರ್.ಬಿ. ಬಸವರಡ್ಡೇರ, ಸಂಘದ ನೂತನ ಉಪಾಧ್ಯಕ್ಷ ಅಂದಪ್ಪ ದ್ವಾಸಲಕೇರಿ, ನಿರ್ದೇಶಕರಾದ ಸುರೇಶ ಬಸವರಡ್ಡೇರ, ಗುರಣ್ಣ ಅವರಡ್ಡಿ, ಮಲ್ಲಿಕಾರ್ಜುನ ಯಲ್ಲರಡ್ಡಿ, ಅಂದಪ್ಪ ವೀರಾಪುರ, ಈರಪ್ಪ ತಳವಾರ, ನಾಗನಗೌಡ ಚನ್ನಪ್ಪಗೌಡ್ರ, ಶಿವಪುತ್ರಪ್ಪ ತೆಗ್ಗಿನಕೇರಿ, ಲಲಿತಾ ಬಸವರಡ್ಡೇರ, ಲಕ್ಷ್ಮವ್ವ ಡಂಬಳ, ಶರಣಪ್ಪ ಬಸವರಡ್ಡೇರ ಪಾಲ್ಗೊಂಡಿದ್ದರು. ಸಿಬ್ಬಂದಿಗಳಾದ ವಿರುಪಾಕ್ಷ ಅಕ್ಕಸಾಲಿ, ಅಯ್ಯಪ್ಪ ಮಳಗಿ, ದೇವರಾಜ ತಳಕಲ್, ಶಿವಪ್ಪ ಬಂಡಿಹಾಳ, ಶರಣಪ್ಪ ಹೂಗಾರ ಕಾಂಗ್ರೆಸ್ ಪಕ್ಷದ ಮುಖಂಡ ಬಸವರಾಜ ಪಲ್ಲೇದ ಮುಂತಾದವರು ಉಪಸ್ಥಿತರಿದ್ದರು.



## ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ,

ಜನರಲ್ ಕಾರಿಯಪ್ಪ ವೃತ್ತ, ರೈತ ಭವನ, ಗದಗ ದೂ: 08372-230338:

**ಅಲ್ಪಾವಧಿ ಟೆಂಡರ್ ಪ್ರಕಟಣೆ:**

ವಿಶ್ವವಿದ್ಯಾಲಯದ ಆವರಣದಲ್ಲಿ ಹಲವು ಕಾಮಗಾರಿಗಳ ಟೆಂಡರ್ ಪ್ರಕಟಣೆ ಹೊರಡಿಸಲಾಗಿದೆ. ಅವುಗಳ ವಿವರಗಳು ಈ ಕೆಳಗಿನಂತಿವೆ.

| ಕ್ರ. ಸಂ | ಕಾಮಗಾರಿ ಹೆಸರು | ಟೆಂಡರ್‌ಗಿಟ್ಟ ಮೊತ್ತ (ರೂ.ಗಳಲ್ಲಿ) | ಟೆಂಡರ್ ದಸ್ತಾವೇಜು ಮೊತ್ತ (ರೂ.ಗಳಲ್ಲಿ) | ಇ.ಎಂ.ಡಿ ಮೊತ್ತ (ರೂ.ಗಳಲ್ಲಿ) | ಮಿಸಲಾತಿ |
|---|---|---|---|---|---|
| 1 | ವಿಶ್ವವಿದ್ಯಾಲಯದ ಆವರಣದಲ್ಲಿ Survey No. 143/2ಬ/ಅ ರಿಂದ ದೇಶಿ ಯೋಜನೆ ಮಾರ್ಗವಾಗಿ ಜೈವಿಕ ಇಂಧನ ಘಟಕದವರೆಗೆ ರಸ್ತೆ ಅಗೀಲಕರಣ ಹಾಗೂ ಸಮತಟ್ಟು ಮಾಡುವ ಕಾಮಗಾರಿ | 4,18,551/- | 1050/- | 10,500/- | ಸಾಮಾನ್ಯ |
| 2 | Electrical Line work for Borewell at Falodyana in KSRDPR University Campus, Gadag" | 2,13,696/- | 1050/- | 3,000/- | ಪರಿಶಿಷ್ಟ ಜಾತಿ |
| 3 | Installation of Pumpset and Accessories for Borewell near Falodyana and near Girls Hostel in KSRDPR University Campus, Gadag" | 3,43,700/- | 1050/- | 9,000/- | ಸಾಮಾನ್ಯ |

ಮೇಲಿನ ಕೋಷ್ಟಕದಲ್ಲಿ ವಿವರಿಸಿದಂತೆ ಸದರಿ ಕಾಮಗಾರಿಗೆ ನಿಗದಿತ ನಮೂನೆ KW-1 ರನ್ವಯ ಮ್ಯಾನುವೆಲ್ ಟೆಂಡರ್ ಆಹ್ವಾನಿಸಲಾಗಿದೆ. ಟೆಂಡರ್‌ದಾರರು ವಿಶ್ವವಿದ್ಯಾಲಯದ ಕಛೇರಿಯಿಂದ ಟೆಂಡರ್ ದಾಸ್ತಾವೇಜು ಪಡೆದು ವೇಳಾ ಪಟ್ಟಿಯಂತೆ ಟೆಂಡರ್ ಸಲ್ಲಿಸಬಹುದಾಗಿದೆ.

**ವಿ.ಸೂ:** 1) GST ಮೊತ್ತವನ್ನು ಪ್ರತ್ತೇಕವಾಗಿ ನೀಡಲಾಗುವುದು. (as per Government Orders)

2) ಹೆಚ್ಚಿನ ವಿವರಗಳಿಗಾಗಿ ಇಂಜನೀಯರಿಂಗ್ ವಿಭಾಗ, ಕ.ರಾ.ಗ್ರಾ.ಪಂ.ರಾ. ವಿಶ್ವವಿದ್ಯಾಲಯ, ನಾಗಾವಿ, ಗದಗ ಇಲ್ಲಿ ಸಂಪರ್ಕಿಸಿರಿ.

1.ಟೆಂಡರ್ ಸಲ್ಲಿಸಲು ಪ್ರಾರಂಭ ದಿನಾಂಕ: 15-03-2024, 11.00 am onwards
2.ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ: 23-03-2024, upto 03.00pm
3.ಟೆಂಡರ್ ತೆರೆಯುವ ದಿನಾಂಕ: 23-03-2024, after 05.00pm ಪ್ರಸ್ತುತ ಹಾಜರಿಂದ ಗುತ್ತಿಗೆದಾರರ ಸಮ್ಮುಖದಲ್ಲಿ ಟೆಂಡರ್ ತೆರೆಯಲಾಗುವುದು.

ವಾ.ಸಾ.ಇ/ಗದಗ/644/2023-24/ದೇಶಪಾಂಡೆಪಬ್ಲಿಸಿಟಿ

ಸಹಿ/- ಕುಲಸಚಿವರು


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka